ಸಂಪುಟ : 10 ಸಂಚಿಕೆ: 216 ಪುಟ : 4+2 ಬೆಲೆ: 3.00 ಮಂಗಳವಾರ ಅಕ್ಟೋಬರ್ 07 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 216 Pages : 4+2 Price : 3.00 Tuesday October 07 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಡಾ. ಶಾಮನೂರು ಶಿವಶಂಕರಪ್ಪರಿಗೆ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ಅ. 9ರಂದು ನಡೆಯುವ ಲಿಂ.ಜ. ವೀರಗಂಗಾಧರ ಮಹಾಸ್ವಾಮಿಗಳ 43ನೇ ಪುಣ್ಯಾರಾಧನೆ ನಿಮಿತ್ತ 'ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಪ್ರಶಸ್ತಿ'ಯನ್ನು ಈ ಬಾರಿ ದಾವಣಗೇರೆಯ ಮಾಜಿ ಸಚಿವ, ಹಾಲಿ ಶಾಸಕ, ಅಖಿಲ ಭಾರತ ವೀರಶೈವ ಮಹಾಸಭೆ ರಾಷ್ಟ್ರೀಯ ಅಧ್ಯಕ್ಷ ಡಾ. ಶಾಮನೂರು ಶಿವಶಂಕರಪ್ಪನವರಿಗೆ ಪ್ರದಾನ ಮಾಡಲಾಗುವದು ಎಂದು ಶಿವಾಚಾರ್ಯ ರತ್ನ ಶ್ರೀ ವಿಮಲರೇಣುಕ ಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳು ತಿಳಿಸಿದರು. ಅವರು ದಾವಣಗೇರೆ ನಗರದಲ್ಲಿ ಡಾ. ಶಾಮನೂರು ಶಿವಶಂಕರಪ್ಪ ಅವರ ನಿವಾಸಕ್ಕೆ ತೆರಳಿ ಪ್ರಥಮ ಬಾರಿಗೆ ನೀಡಲಾಗುತ್ತಿರುವ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಪ್ರಶಸ್ತಿ ಸಮಾರಂಭಕ್ಕೆ ಆಗಮಿಸಿ ಪ್ರಶಸ್ತಿ ಸ್ವೀಕರಿಸಲು ಅಧಿಕೃತವಾಗಿ ಆಹ್ವಾನ ನೀಡಿದರು. ಶಾಮನೂರು ಶಿವಶಂಕರಪ್ಪನವರು ವೀರಶೈವ ಸಮಾಜದ ದೊಡ್ಡ ಆಸ್ತಿಯಾಗಿದ್ದು, ಸಮಾಜದ ಸಂಘಟನೆಗೆ ವಿಶೇಷ ಕಾರ್ಯ ಮಾಡಿರುವ ಅವರಿಗೆ ಈ ಪ್ರಶಸ್ತಿ ನೀಡಲಾಗುತ್ತಿದೆ. ರಂಭಾಪುರಿ ಜ.ಡಾ. ಪ್ರಸನ್ನ ರೇಣುಕ ವೀರಸೋಮೇಶ್ವರ ಭಗವತ್ಪಾದಂಗಳ ದಿವ್ಯ ಸಾನ್ನಿಧ್ಯದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಗುವದು ಎಂದು ಹೇಳಿದರು.

ಈ ವೇಳೆ ಗಣಿ, ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ, ಸಂಸದೆ ಪ್ರಭಾವತಿ ಮಲ್ಲಿಕಾರ್ಜುನ ಮತ್ತಿತರರು ಹಾಜರಿದ್ದರು.

### ಬಂಜಾರ ಸಮುದಾಯದಿಂದ ಬೃಹತ್ ಪ್ರತಿಭಟನೆ । ಅನಿರ್ದಿಷ್ಟಾವಧಿ ಅಹೋರಾತ್ರಿ ಧರಣಿ

# ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣ ಕೈಬಿಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಶಿಷ್ಟ ಜಾತಿಗಳಲ್ಲಿನ ಒಳಮೀಸಲಾತಿಯ ಅವೈಜ್ಞಾನಿಕ ವರ್ಗೀಕರಣವನ್ನು ವಿರೋಧಿಸಿ ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿ ಹಾಗೂ ಜಿಲ್ಲಾ ಬಂಜಾರ ಸಮುದಾಯದ ವಿವಿಧ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ಸೋಮವಾರ ನಗರದ ಗಾಂಧಿ ವೃತ್ತದಲ್ಲಿ ಬಂಜಾರ ಸಂಪ್ರದಾಯದಂತೆ ಭೋಗ್ ಹಚ್ಚಿ ನಗಾರಿ ಬಾರಿಸುವುದರ ಮೂಲಕ ಬೃಹತ್ ಪ್ರತಿಭಟನೆ ಹಾಗೂ ಅನಿರ್ದಿಷ್ಟಾವಧಿ ಅಹೋರಾತ್ರಿ ಧರಣಿ ಸತ್ಯಾಗ್ರಹ ಆರಂಭಿಸಿದರು.

ನಗರದ ಗಾಂಧಿ ವೃತ್ತದಿಂದ ಪ್ರಾರಂಭವಾದ ಪಾದಯಾತ್ರೆ ಮಹೇಂದ್ರಕರ್ ಸರ್ಕಲ್ ಮಾರ್ಗವಾಗಿ ಟಾಂಗಾಕೂಟ, ಬಸವೇಶ್ವರ ಸರ್ಕಲ್, ಚೆನ್ನಮ್ಮ ವೃತ್ತ, ಟಿಪ್ಪು ಸುಲ್ತಾನ್ ವೃತ್ತ ಮಾರ್ಗವಾಗಿ ಗದಗ ಜಿಲ್ಲಾಧಿಕಾರಿಗಳ ಕಛೇರಿ ತಲುಪಿ ಅಹೋರಾತ್ರಿ ಧರಣಿ ಪ್ರಾರಂಭವಾಯಿತು.




ಬಂಜಾರ ಹಕ್ಕು ಸಂರಕ್ಷಣಾ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ ರವಿಕಾಂತ ಅಂಗಡಿ ಮಾತನಾಡಿ, ನಿವೃತ್ತ ನ್ಯಾಯಮೂರ್ತಿ ನಾಗಮೋಹನದಾಸ ಅವರ ಏಕಸದಸ್ಯ ಆಯೋಗದ ವರದಿ ಸುಪ್ರೀಂ ಕೋರ್ಟ್‌ನ ಮಾನದಂಡಗಳನ್ನು ಉಲ್ಲಂಘಿಸಿದೆ. ಇದು ನಿವೃತ್ತ ನ್ಯಾಯಮೂರ್ತಿ ಎ.ಜೆ. ಸದಾಶಿವ ಆಯೋಗದ ಮುಂದುವರಿದ ಭಾಗದಂತಿದೆ. ಶಿಕ್ಷಣ, ಉದ್ಯೋಗ, ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿಯ ಅಂಕಿ-ಅಂಶಗಳು ವಾಸ್ತವಿಕತೆಗೆ ದೂರವಾಗಿವೆ. ಕೆಲವು ಕುಟುಂಬಗಳು ಅಲಭ್ಯತೆಯ ಕಾರಣಕ್ಕೆ ಸಮೀಕ್ಷೆ ಅಪೂರ್ಣವಾಗಿದೆ ಎಂದು ಆಯೋಗವೇ ಒಪ್ಪಿಕೊಂಡಿದ್ದರೂ ಸರ್ಕಾರ ಈ ಅಪೂರ್ಣ ವರದಿಯನ್ನೇ ಜಾರಿಗೊಳಿಸಿ ಕೊಲಂಬೋ ಸಮುದಾಯಕ್ಕೆ ಅನ್ಯಾಯವೆಸಗಿದೆ. ಸುಮಾರು 12 ದಿನಗಳ ಈ ಹೋರಾಟದಲ್ಲಿ ರಾಜ್ಯದ ಮೂಲೆ ಮೂಲೆಯಿಂದ ಅನೇಕ ಮಠಾಧೀಶರು ಮತ್ತು ಮುಖಂಡರು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, 2011ರ ಜನಗಣತಿಯ ಅಂಕಿ-ಅಂಶಗಳನ್ನು 2025ರೊಂದಿಗೆ ಹೋಲಿಸಿದಾಗ, ಕೆಲ ಜಾತಿಗಳ ಜನಸಂಖ್ಯೆ ಕೇವಲ ಶೇ. 1.13ರಷ್ಟು ಹೆಚ್ಚಳ ತೋರಿಸಲಾಗಿದೆ. ಇನ್ನು ಕೆಲ ಜಾತಿಗಳಿಗೆ ಶೇ. 10ರಿಂದ 12ರಷ್ಟು ಹೆಚ್ಚಳ ತೋರಿಸಿರುವುದರ ಹಿಂದಿನ ಮರ್ಮವನ್ನು ನಾಗಮೋಹನದಾಸ ಅವರು ಬಹಿರಂಗಪಡಿಸಬೇಕಿದೆ. ಈ ಅವೈಜ್ಞಾನಿಕ ಒಳಮೀಸಲಾತಿಯನ್ನು ಕೂಡಲೇ ಕೈಬಿಡಬೇಕು. ಈ ಹಿಂದೆ ಹೋರಾಟ ನಡೆದಾಗ ಜಿಲ್ಲಾ ಉಸ್ತುವಾರಿ ಸಚಿವರು ಮಾತು ಕೊಟ್ಟಿದ್ದರೂ ಅದರಂತೆ ನಡೆದುಕೊಳ್ಳಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಬಂಜಾರ ಸಮುದಾಯದ ಮುಖಂಡ ಉಮೇಶ ರಾಠೋಡ ಮಾತನಾಡಿ, ಆಯೋಗ ಸಿದ್ಧಪಡಿಸಿದ ಕೋಷ್ಟಕದಲ್ಲಿ, 'ಡಿ' ಗುಂಪಿನಲ್ಲಿರುವ ಲಂಬಾಣಿ ಮತ್ತು ಇತರೆ ಸಮುದಾಯವು 23 ಮಾನದಂಡಗಳಲ್ಲಿ ಕೇವಲ 6 ವಿಷಯಗಳಲ್ಲಿ ಮಾತ್ರ ತುಸು ಮುಂದಿದ್ದು, ಉಳಿದ 17 ವಿಷಯಗಳಲ್ಲಿ 'ಸಿ' ಗುಂಪಿಗಿಂತ ತುಂಬಾ ಹಿಂದುಳಿದಿದೆ ಎಂಬುದನ್ನು ತೋರಿಸಲಾಗಿದೆ. ▸▸3ನೇ ಪುಟಕ್ಕೆ

> ಜಿಲ್ಲಾ ಉಸ್ತುವಾರಿ ಸಚಿವರು ಈ ಹಿಂದೆ ನಾವು ಹೋರಾಟ ಮಾಡಿದಾಗ ನಮ್ಮ ಸಮಾಜದ ಸ್ವಾಮಿಗಳಿಗೆ ನಿಮ್ಮ ಅರ್ಜಿಯನ್ನು ತಲೆಯ ಮೇಲಿಟ್ಟು ಸಮಾಜದ ಹಿತ ಕಾಪಾಡುತ್ತೇನೆಂದು ಹೇಳಿದ್ದರು. ಇನ್ನೂ ಕಾಲ ಮಿಂಚಿಲ್ಲ. ಮುಖ್ಯಮಂತ್ರಿಗಳಿಗೆ ಬಂಜಾರ ಸಮುದಾಯಕ್ಕೆ ಆದ ನೋವನ್ನು ಮನವರಿಕೆ ಮಾಡುವ ನಿಟ್ಟಿನಲ್ಲಿ ಕೆಲಸ ಮಾಡುತ್ತಾರೆಂಬ ಭರವಸೆಯಿದೆ. ನಮ್ಮ ಹೋರಾಟ ಶಾಂತಿಯುತವಾಗಿದೆ. ಸರ್ಕಾರ ಗಂಭೀರವಾಗಿ ತೆಗೆದುಕೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಕ್ರಾಂತಿಯುತವಾದ ಹೋರಾಟ ಹಮ್ಮಿಕೊಳ್ಳಲಾಗುತ್ತದೆ.
>
> **– ರವಿಕಾಂತ ಅಂಗಡಿ.**
> ಬಂಜಾರ ಹಕ್ಕು ಸಂರಕ್ಷಣಾ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ.

### ಅಗಡಿ ಕಾಲೇಜಿನಲ್ಲಿ 'ವಿಶ್ವ ಅಂತರಿಕ್ಷ ಸಪ್ತಾಹ' ಕಾರ್ಯಕ್ರಮ

# ಬಾಹ್ಯಾಕಾಶ ವಿಜ್ಞಾನದಲ್ಲಿ ಆಸಕ್ತಿ ಹೊಂದಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನಾವು ವಾಸಿಸುವ ಭೂಮಿಯ ವಾತಾವರಣ ತಂತ್ರಜ್ಞಾನದ ಪ್ರಭಾವದಿಂದ ದಿನ ಕಳೆದಂತೆ ಹದಗೆಡುತ್ತಿದೆ. ಭವಿಷ್ಯದ ದಿನಗಳಲ್ಲಿ ಭೂಮಿ ಮೇಲಿನ ಜೀವಿಗಳ ಬದುಕು ಕಷ್ಟಕರವಾಗುತ್ತದೆ ಎಂದು ಇಸ್ರೋ ಹಿರಿಯ ವಿಜ್ಞಾನಿ ಶಿವಾನಂದ ಕಾಮತ್ ಹೇಳಿದರು.

ಅವರು ಸೋಮವಾರ ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ತಾಂತ್ರಿಕ ಮತ್ತು ಅಭಿಯಾಂತ್ರಿಕ ಹಾಗೂ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಬೆಂಗಳೂರಿನ ಯು.ಆರ್. ರಾವ್ ಉಪಕೇಂದ್ರದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 'ವಿಶ್ವ ಅಂತರಿಕ್ಷ ಸಪ್ತಾಹ' ಉದ್ದೇಶಿಸಿ ಮಾತನಾಡಿದರು.

ಬಾಹ್ಯಾಕಾಶ ವಿಜ್ಞಾನ, ತಂತ್ರಜ್ಞಾನ ಮತ್ತು ಅಂತರಿಕ್ಷದ ಜ್ಞಾನವನ್ನು ಶಾಲಾ-ಕಾಲೇಜು ಮಕ್ಕಳಲ್ಲಿ ಮೂಡಿಸುವುದು ಇಂದಿನ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಅಂತಾರಾಷ್ಟ್ರೀಯ ಬಾಹ್ಯಾಕಾಶ ಸಂಸ್ಥೆಗಳು, ತಾರಾಲಯಗಳು, ವಿಜ್ಞಾನ ಕೇಂದ್ರಗಳು ಈ ಸಪ್ತಾಹದಲ್ಲಿ ಈ ವರ್ಷ ಬಹಳ ದೊಡ್ಡ ಮಟ್ಟದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿವೆ. ಭಾರತದಲ್ಲಿ ಇಸ್ರೋ ತನ್ನ ಕೇಂದ್ರಗಳ ಮೂಲಕ ಹಾಗೂ ದೇಶದ ವಿಜ್ಞಾನಾಸಕ್ತ ಸಂಸ್ಥೆಗಳ ಮೂಲಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ. ಒಟ್ಟಿನಲ್ಲಿ ನಮ್ಮ ಮುಂದಿನ ಯುವ ಜನಾಂಗ ಈ ಕ್ಷೇತ್ರದಲ್ಲಿ ಸಾಧನೆ ಮಾಡುವ ಆಸಕ್ತಿ ಬೆಳೆಸಿಕೊಳ್ಳಬೇಕೆನ್ನುವುದು ಸಪ್ತಾಹದ ಉದ್ದೇಶವಾಗಿದೆ ಎಂದರು.

ಮುಂದಿನ ದಿನಗಳಲ್ಲಿ ಭೂಮಿಯನ್ನು ಹೊರತುಪಡಿಸಿ ಬೇರೆ ಗ್ರಹಗಳ ಮೇಲೆ ವಾಸಿಸುವ ಪರಿಸ್ಥಿತಿ ಬಂದರೂ ಅಚ್ಚರಿ ಇಲ್ಲ. ಈ ಕುರಿತು ಈಗಾಗಲೇ ಸಂಶೋಧನೆಗಳು ಭರದಿಂದ ಸಾಗಿವೆ. ಬೇರೆ ಗ್ರಹಗಳಿಂದ ಜೀವಿಗಳು ಭೂಮಿಗೆ ಬರುತ್ತಿರುವ ಬಗ್ಗೆ ಆಗಾಗ ಸುದ್ದಿಗಳು ಕೇಳಿ ಬರುತ್ತಿವೆ. ಅಂದರೆ ಭೂಮಿಯನ್ನು ಬಿಟ್ಟು ಬೇರೆ ಗ್ರಹಗಳಲ್ಲೂ ನಮ್ಮಂತೆ ಜೀವಿಗಳು ಇರಬಹುದು ಎಂಬುದನ್ನು ಇದು ಸಾಬೀತುಪಡಿಸುತ್ತದೆ. ಭವಿಷ್ಯದಲ್ಲಿ ಅನ್ಯ ಗ್ರಹಗಳ ಮೇಲೆ ಮಾನವರು ಜೀವನ ಸಾಗಿಸಬಹುದು. ಈ ನಿಟ್ಟಿನಲ್ಲಿ ನಿರಂತರ ಸಂಶೋಧನೆಗಳು ನಡೆದಿವೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ಮಾತನಾಡಿ, ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ವಿದ್ಯಾರ್ಥಿಗಳಿಗೆ ಅಂತರಿಕ್ಷ ಚಟುವಟಿಕೆಗಳ ಕುರಿತು ಆಸಕ್ತಿ, ಅರಿವು ಮತ್ತು ಸೃಜನಶೀಲತೆಯನ್ನು ಬೆಳೆಸುವ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ವಿದ್ಯಾರ್ಥಿಗಳು ಅಂತರಿಕ್ಷದ ಕುರಿತು ಕುತೂಹಲ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಇಸ್ರೋ ವಿಜ್ಞಾನಿಗಳಾದ ಮೀನಾ ರವೀಂದ್ರ, ಟಿ.ಎಸ್. ಗೋವಿಂದರಾಜ, ಸುಮಾ ಲೋಖಂಡೆ, ಬಿಇಒ ಎಚ್.ಎನ್. ನಾಯಕ, ಸ್ವಪ್ನ ಚನ್ನಗೌಡರ, ರತ್ನಾಪ್ರಭಾ, ಆರ್.ಎಂ. ಪಾಟೀಲ, ಸುಭಾಶ ಮೇಟಿ, ಶುಭಾ ಡಿ, ವಿಕ್ರಂ ಶಿರೋಳ, ಪ್ರಕಾಶ ಹೊಂಗಲ, ಮಾಲತೇಶ ಸೂರಣಗಿ ಇದ್ದರು.

> ವಿಶ್ವ ಅಂತರಿಕ್ಷ ಸಪ್ತಾಹ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಹಿರಿಯ ವಿಜ್ಞಾನಿಗಳಿಂದ ಬಾಹ್ಯಾಕಾಶ ವಿಜ್ಞಾನ-ತಂತ್ರಜ್ಞಾನದ ಬಗ್ಗೆ ಪ್ರಾಯೋಗಿಕವಾಗಿ ತಿಳಿದುಕೊಳ್ಳಲಾಯಿತು. ಬಾಹ್ಯಾಕಾಶ ಸಂಶೋಧನಾ ಕೇಂದ್ರಗಳಿಗೆ ಹೋಗಲಾಗದ ನಮ್ಮಂತಹ ಗ್ರಾಮೀಣ ಭಾಗದ ಮಕ್ಕಳಿಗೆ ನಮ್ಮೂರ ಅಗಡಿ ಕಾಲೇಜಿನಲ್ಲಿ ವಿಜ್ಞಾನ ಲೋಕವನ್ನೇ ಸೃಷ್ಟಿಸಿ ವಿಜ್ಞಾನ ಲೋಕದ ಪರಿಕಲ್ಪನೆ ಮೂಡಿಸಿದ್ದು ಸಾಕಷ್ಟು ಅನಕೂಲವಾಯಿತು.
>
> **– ಚಂದನ ಕಳಸಾಪುರ, ವಿನುತಾ ಘೋರ್ಪಡೆ.**
> ದ. ಯೂನಿಕ್ ಸ್ಕೂಲ್, ಲಕ್ಷ್ಮೇಶ್ವರ.

# ಹಿಂಗಾರು ಬಿತ್ತನೆ ಬೀಜಗಳ ವಿತರಣೆ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ತಾಲೂಕಿನ ಶಿರಗುಪ್ಪಿ ರೈತ ಸಂಪರ್ಕ ಕೇಂದ್ರದಲ್ಲಿ ಶಾಸಕ ಎನ್.ಎಚ್. ಕೋನರಡ್ಡಿ ಅವರು ಹಿಂಗಾರು ಬಿತ್ತನೆ ಬೀಜಗಳ ವಿತರಣೆಗೆ ಚಾಲನೆ ನೀಡಿದರು. ಉತ್ತಮ ಗುಣಮಟ್ಟದ ಬಿತ್ತನೆ ಬೀಜಗಳನ್ನು ಸಕಾಲದಲ್ಲಿ ಪೂರೈಸಲು ಹಾಗೂ ರೈತರಿಗೆ ತೊಂದರೆಯಾಗದಂತೆ ಸೂಕ್ತ ಕ್ರಮ ಕೈಗೊಳ್ಳಲು ಇಲಾಖೆ ಅಧಿಕಾರಿಗಳಿಗೆ ಅವರು ಕಟ್ಟುನಿಟ್ಟಾಗಿ ಸೂಚಿಸಿದರು.

ಈ ಸಂದರ್ಭದಲ್ಲಿ ಜಂಟಿ ಕೃಷಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ಹುಬ್ಬಳ್ಳಿ ಗ್ರಾಮೀಣ ತಹಸೀಲ್ದಾರ ಜೆ.ಬಿ. ಮಜ್ಜಗಿ, ಸಹಾಯಕ ಕೃಷಿ ಅಧಿಕಾರಿ ಮಂಜುಳಾ ತೆಂಬದ, ತಾಲೂಕಾ ಕೃಷಿಕ ಸಮಾಜದ ಅಧ್ಯಕ್ಷ ಗುರುನಾಥಗೌಡ ಮಾದಾಪುರ, ಕೃಷಿಕ ಸಮಾಜ ಜಿಲ್ಲಾ ಪ್ರತಿನಿಧಿ ಲಿಂಗಪ್ಪ ಬಾಡಿನ, ಶಿರಗುಪ್ಪಿ ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಶಿರಗುಪ್ಪಿ ಗ್ರಾಮದ ರೈತ ಮುಖಂಡರು, ಕೃಷಿ ಅಧಿಕಾರಿಗಳು ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಹಳೆಯ ವಿದ್ಯಾರ್ಥಿಗಳ ಸಭೆ ನಾಳೆ


■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶತಮಾನೋತ್ಸವದ ಆಚರಿಸಿಕೊಳ್ಳಲಿರುವ ಪಟ್ಟಣದ ಶ್ರೀ ಉಮಾ ವಿದ್ಯಾಲಯ ಮುನ್ಸಿಪಲ್ ಹೈಸ್ಕೂಲ್‌ನಲ್ಲಿ ಕಳೆದ 100 ವರ್ಷಗಳಿಂದ ವಿದ್ಯಾಭ್ಯಾಸ ಮಾಡಿರುವ ವಿದ್ಯಾರ್ಥಿಗಳ ಸಭೆಯನ್ನು ಅ.8ರಂದು ಮುಂಜಾನೆ 10 ಗಂಟೆಗೆ ಪಟ್ಟಣದ ಶ್ರೀ ಜ.ವೀರಗಂಗಾಧರ ಸಮುಧಾಯ ಭವನದಲ್ಲಿ ಕರೆಯಲಾಗಿದೆ.

ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ ಅವರ ನೇತೃತ್ವದಲ್ಲಿ ಸಭೆಯನ್ನು ಆಯೋಜಿಸಲಾಗಿದ್ದು, ಸಭೆಯಲ್ಲಿ ಇದೇ ವರ್ಷ 100 ಸಂವತ್ಸರಗಳನ್ನು ಪೂರೈಸಲಿರುವ ಉ ವ ' ು ಾ ▸▸3ನೇ ಪುಟಕ್ಕೆ

# ಅಹವಾಲು ಸ್ವೀಕಾರ, ಪರಿಹಾರ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ, ಎಲ್ಲ ಅರ್ಹ ಫಲಾನುಭವಿಗಳನ್ನು ಯೋಜನೆ ವ್ಯಾಪ್ತಿಗೆ ತರಲು ಗದಗ ತಾಲೂಕ ಮಟ್ಟದಲ್ಲಿ ಗ್ರಾಮ ಪಂಚಾಯಿತಿ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಪಲಾನುಭವಿಗಳ ಮತ್ತು ಸಾರ್ವಜನಿಕ ಅಹವಾಲು ಸ್ವೀಕಾರ ಹಾಗೂ ಪರಿಹಾರ ಸಭೆ ಹಮ್ಮಿಕೊಳ್ಳಲಾಗಿದೆ.

ಗದಗ ತಾಲೂಕು ಪಂಚಾಯಿತಿ ಪಂಚ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಅವರ ನಿರ್ದೇಶನದ ಮೇರೆಗೆ ಈ ಕಾರ್ಯಕ್ರಮಗಳನ್ನು ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಆಯೋಜಿಸಲಾಗುತ್ತಿದೆ. ಸರ್ಕಾರದ ಜನಪರ ಯೋಜನೆಗಳು ಗ್ರಾಮ ಮಟ್ಟದಲ್ಲಿ ತಲುಪುವಂತೆ ಮಾಡುವುದು ಹಾಗೂ ಯಾವುದೇ ಅರ್ಹ ಫಲಾನುಭವಿಯು ಂ ' ೋ ೀ ಜ ನ ' ಯಿ ು ಂ ದ ' ಹೊರಗುಳಿಯದಂತೆ ಖಚಿತ ಪಡಿಸುವುದು ಕಾರ್ಯಕ್ರಮಗಳ ಉದ್ದೇಶವಾಗಿದೆ.

ಅಕ್ಟೋಬರ್ 9ರಂದು ಯಲಿಶಿರೂರು ಗ್ರಾ.ಪಂ ಕಾರ್ಯಾಲಯದಲ್ಲಿ ಬೆಳಿಗ್ಗೆ 10.30 ಗಂಟೆಗೆ, ಹರ್ತಿ ಗ್ರಾ.ಪಂ ಕಾರ್ಯಾಲಯದಲ್ಲಿ ಮಧ್ಯಾಹ್ನ 3 ಗಂಟೆಗೆ, ಅಕ್ಟೋಬರ್ 10ರಂದು ನಾಗಾವಿ ಗ್ರಾ.ಪಂ ಕಾರ್ಯಾಲಯದಲ್ಲಿ ಬೆಳಿಗ್ಗೆ 10.30 ಗಂಟೆಗೆ, ಕಳಸಾಪೂರ ಗ್ರಾ.ಪಂ ಕಾರ್ಯಾಲಯದಲ್ಲಿ ಮಧ್ಯಾಹ್ನ 3 ಗಂಟೆಗೆ ಸಭೆ ನಡೆಯಲಿದೆ.

ಕಾ ಂ ರ್ು ಕ್ರ ಮ ು ಗ ಳ ಲ್ಲಿ ಪಂಚಾಯಿತಿಯ ಜನಪ್ರತಿನಿಧಿಗಳು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಸಂಬಂಧಪಟ್ಟ ಐದು ಇಲಾಖೆಗಳ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಅವರು ಸಾರ್ವಜನಿಕರ ಪ್ರಶ್ನೆಗಳಿಗೆ ನೇರವಾಗಿ ಸ್ಪಂದಿಸಿ, ಯೋಜನೆಗಳ ಪ್ರಯೋಜನಗಳ ಕುರಿತು ಮಾಹಿತಿ ನೀಡಲಿದ್ದಾರೆ. ಪಂಚ ಗ್ಯಾರಂಟಿ ಯೋಜನೆಗಳ ಯಶಸ್ವಿ ಅನುಷ್ಠಾನಕ್ಕೆ ಸಾರ್ವಜನಿಕರ ಸಹಭಾಗಿತ್ವ ಅಗತ್ಯವಿದ್ದು, ಈ ಸಭೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಫಲಾನುಭವಿಗಳು ಹಾಜರಾಗಿ, ಯೋಜನೆಗಳ ಉಪಯೋಗ ಪಡೆಯಲು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


### ಮೂರು ರಸ್ತೆಗಳು ಕೂಡುವ ಜಾಗದಲ್ಲಿ ರಂಗೋಲಿ, ಕುಂಕುಮ, ಸೀಳಿದ ನಿಂಬೆ ಹಣ್ಣು

# ಅತ್ತಿಮಬ್ಬೆ ಮಹಾದ್ವಾರದೆದುರು ವಾಮಾಚಾರ!

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಜನನಿಬಿಡ ಪ್ರದೇಶವಾದ ದಾನಚಿಂತಾಮಣಿ ಅತ್ತಿಮಬ್ಬೆ ಮಹಾದ್ವಾರದ ಮುಂದೆಯೇ ವಾಮಚಾರ ಪ್ರಯೋಗ ಮಾಡಿದ ಘಟನೆ ಸೋಮವಾರ ಬೆಳಿಗ್ಗೆ ಬೆಳಕಿಗೆ ಬಂದಿದ್ದು, ರಸ್ತೆಯಲ್ಲಿ ಸಂಚರಿಸುವ ಜನರು ಆತಂಕಕ್ಕೊಳಗಾಗಿದ್ದಾರೆ.

ಚೌಕಾಕಾರದಲ್ಲಿ ನಕ್ಷತ್ರ ಆಕಾರದ ರಂಗೋಲಿ ಬಿಡಿಸಿ ಮಂಗಳ ಕುಂಡ ರಚಿಸಲಾಗಿದೆ. ಅದರಲ್ಲಿ ಸೀಳಿದ ನಿಂಬೆಹಣ್ಣು, ಎಕ್ಕೆ ಎಲೆ, ಅಡಿಕೆ, ಕುಂಕಮ, ಭಂಡಾರವನ್ನು ಹಾಕಿ ವಾಮಾಚಾರ ಮಾಡಿದ್ದನ್ನು ಕಂಡು ಗ್ರಾಮಸ್ಥರು ಆತಂಕದಲ್ಲಿಯೇ ಸಂಚರಿಸುವಂತಾಯಿತು. ಮೂರು ರಸ್ತೆಗಳು ಕೂಡುವ ಮಹಾದ್ವಾರದ ಮುಂದಿನ ರಸ್ತೆಯ ಮಧ್ಯೆಯೇ ಇದನ್ನು ಇಡಲಾಗಿದೆ. ಇದೇ ರೀತಿ



ಭೀಮಾಂಬಿಕಾ ದೇವಸ್ಥಾನದ ಹತ್ತಿರ ಮೂರು ರಸ್ತೆ ಕೂಡುವ ಹಾತಲಗೇರಿ ರಸ್ತೆಯಲ್ಲಿಯೂ ಸಹ ಅಡಕೆ, ಎಲೆ, ನಿಂಬೆಹಣ್ಣು, ಪಣತಿಯನ್ನು ಇಟ್ಟು ವಾಮಚಾರ ನಡೆಸಿರುವುದು ಗ್ರಾಮಸ್ಥರನ್ನು ಚಿಂತೆಗೀಡು ಮಾಡಿದೆ. ಕಳೆದ ಹಲವು ತಿಂಗಳಿಂದ ಬಸ್ ನಿಲ್ದಾಣದ ಹತ್ತಿರವಿರುವ ಅಂಗಡಿಗಳಲ್ಲಿ ಕಳ್ಳತನದ ಪ್ರಕರಣಗಳು ನಡೆದಿವೆ. ಇದರಿಂದ ಎಚ್ಚೆತ್ತ ಮಾಲೀಕರು ಜಾಗೃತರಾಗಿ ಅಂಗಡಿಗಳಲ್ಲಿ ರಾತ್ರಿ ಹೊತ್ತಿನವರೆಗೂ ಕಳೆಯುತ್ತಿದ್ದಾರೆ. ಅವರು ಬೇಗ ಅಂಗಡಿಯಿಂದ ಹೋಗುವಂತೆ ಮಾಡಿರುವ ತಂತ್ರ ಇದಾಗಿರಬಹುದು ಎಂದು ಶಂಕಿಸಲಾಗಿದೆ.

ಹಲವಾರು ತಿಂಗಳಿಂದ ಗ್ರಾಮದಲ್ಲಿ ಕಳ್ಳತನದ ಪ್ರಕರಣಗಳು ಹೆಚ್ಚಾಗುತ್ತಿವೆ. ಕಳ್ಳರನ್ನು ಪತ್ತೆ ಹಚ್ಚಲು ಈವರೆಗೂ ಪೊಲೀಸರಿಗೂ ಸಾಧ್ಯವಾಗುತ್ತಿಲ್ಲ. ಕಳ್ಳರನ್ನು ಪತ್ತೆ ಹಚ್ಚಲು ಗ್ರಾಮದ ಪ್ರಮುಖ ಸ್ಥಳಗಳಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸಬೇಕೆಂದು ಇತ್ತೀಚೆಗೆ ವಾರ್ಡ್ ಮತ್ತು ಗ್ರಾಮ ಸಭೆಯಲ್ಲಿ ಗ್ರಾಮಸ್ಥರು ಒತ್ತಾಯಿಸಿದ್ದರು. ಸಿ.ಸಿ. ಕ್ಯಾಮರಾ ಅಳವಡಿಸಿದ್ದರೆ ವಾಮಾಚಾರದಂತಹ ಭಯ ಮೂಡಿಸುವ ಕೆಲಸ ಮಾಡಿದ ದುಷ್ಕರ್ಮಿಗಳನ್ನು ಪತ್ತೆ ಹಚ್ಚಲು ಸಾಧ್ಯವಾಗುತ್ತಿತ್ತು ಎಂದು ಗ್ರಾಮಸ್ಥರು ಆಕ್ರೋಶ ಹೊರಹಾಕಿದ್ದಾರೆ.

ಜನನಿಬಿಡ ಪ್ರದೇಶವಾದ ಅತ್ತಿಮಬ್ಬೆ ಮಹಾದ್ವಾರದ ಮುಂದೆ ವಾಮಾಚಾರ ಮಾಡಿದ ದೃಶ್ಯಗಳು ಗ್ರಾಮಸ್ಥರಲ್ಲಿ ಆತಂಕವನ್ನುಂಟುಮಾಡಿದೆ. ಇಂತಹ ಪ್ರಕರಣವನ್ನು ಮಾಡಿರುವ ದುಷ್ಕರ್ಮಿಗಳನ್ನು ಪೊಲೀಸರು ಪತ್ತೆ ಹಚ್ಚಿ ಕ್ರಮಜರುಗಿಸಬೇಕು ಎಂದು ಸಮಾಜ ಸೇವಕ ಬಸವರಾಜ ಮುಳ್ಳಾಳ ಒತ್ತಾಯಿಸಿದ್ದಾರೆ.

> ಕಳ್ಳತನ ಹಾಗೂ ವಾಮಚಾರದ ಘಟನೆಗಳು ಇತಿಹಾಸ ಪ್ರಸಿದ್ಧ ಲಕ್ಕುಂಡಿಯಲ್ಲಿ ಹೆಚ್ಚಾಗಿ ನಡೆಯುತ್ತಿವೆ. ಇದರಿಂದ ದಿನನಿತ್ಯ ಆಗಮಿಸುವ ಪ್ರವಾಸಿಗರಿಗೆ ಮುಜುಗರವಾಗುವಂತಾಗಿದೆ. ಗ್ರಾಮದ ಪ್ರಮುಖ ಸ್ಥಳಗಳಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸಲು ಗ್ರಾಮ ಸಭೆ, ಸಾಮಾನ್ಯ ಸಭೆಯಲ್ಲಿ ಒತ್ತಾಯಿಸಿದರೂ ಅಧಿಕಾರಿಗಳು ಕಾಳಜಿ ವಹಿಸುತ್ತಿಲ್ಲ.
>
> **– ವಿರೂಪಾಕ್ಷಿ ಬೆಟಗೇರಿ.**
> ಗ್ರಾ.ಪಂ ಸದಸ್ಯರು.



ವಿಶ್ವ ವಿಖ್ಯಾತ ಮೈಸೂರು ದಸರಾ ಉತ್ಸವದ ಅಂಗವಾಗಿ 'ನಾಡಗೀತೆಗೆ ನೂರರ ಸಂಭ್ರಮ–ಸಾವಿರಾರು ಸ್ವರಸಂಗಮ' ಕಾರ್ಯಕ್ರಮದಲ್ಲಿ ಏರ್ಪಡಿಸಿದ್ದ ಕವಿಗೋಷ್ಠಿಯಲ್ಲಿ ಗದಗ ಜಿಲ್ಲೆಯ ರೋಣ ತಾಲೂಕಿನ ಕೊತಬಾಳ ಗ್ರಾಮದ ಹಿರಿಯ ಕಲಾವಿದ ಶಂಕ್ರಣ್ಣ ಸಂಕಣ್ಣವರ ಅವರು ಸ್ವರಚಿತ ಲಾವಣಿ ಮತ್ತು ಗೀಗಿ ಪದಗಳನ್ನು ಪ್ರಸ್ತುತಪಡಿಸಿದರು. ಲಕ್ಕುಂಡಿಯ ಬಸವರಾಜ ಹಡಗಲಿ ಹಾಗೂ ನೀಲಗುಂದದ ನಾಗರಾಜ ಜಕ್ಕಮ್ಮನವರ ಅವರು ಸಾಥ್ ನೀಡಿದರು. ಕಾರ್ಯಕ್ರಮ ನೀಡಿದ ಕಲಾವಿದರಿಗೆ ಕವಿಗೋಷ್ಠಿ ದಸರಾ ಉಪ ಸಮಿತಿಯಿಂದ ಸನ್ಮಾನಿಸಲಾಯಿತು.

## ಬಿಹಾರ ವಿಧಾನಸಭೆ ಚುನಾವಣಾ ದಿನಾಂಕ ಪ್ರಕಟ: ಎರಡು ಹಂತಗಳಲ್ಲಿ ಮತದಾನ

■ವಿಜಯಸಾಕ್ಷಿ ಸುದ್ದಿ, ಬಿಹಾರ

ಬಹು ನಿರೀಕ್ಷಿತ ಬಿಹಾರ ವಿಧಾನಸಭಾ ಚುನಾವಣೆಯ ದಿನಾಂಕ ಘೋಷಣೆಯಾಗಿದೆ. ನವೆಂಬರ್ 6 ಮತ್ತು 11 ರಂದು ಎರಡು ಹಂತಗಳಲ್ಲಿ ಮತದಾನ ನಡೆಯಲಿದ್ದು, 14ರಂದು ಮತ ಎಣಿಕೆ ಮಾಡಲಾಗುತ್ತದೆ.

ಸೋಮವಾರ (ಅ.6) ದೆಹಲಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ನವೆಂಬರ್ 6ರಂದು ಮೊದಲ ಹಂತದಲ್ಲಿ 121 ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಈ ಕುರಿತು ಅಕ್ಟೋಬರ್ 10ರಂದು ಅಧಿಸೂಚನೆ ಹೊರಡಿಸಲಾಗುವುದು. ಅಕ್ಟೋಬರ್ 17 ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ ಮತ್ತು ಉಮೇದುವಾರಿಕೆ ಹಿಂಪಡೆಯಲು ಅಕ್ಟೋಬರ್ 20 ಕೊನೆಯ ದಿನವಾಗಿದೆ ಎಂದು ತಿಳಿಸಿದ್ದಾರೆ.

ನವೆಂಬರ್ 11ರಂದು ಎರಡನೇ ಹಂತದಲ್ಲಿ, 122 ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಈ ಬಗ್ಗೆ ಅಕ್ಟೋಬರ್ 13ರಂದು ಅಧಿಸೂಚನೆ ಹೊರಡಿಸಲಾಗುವುದು. ಎರಡನೇ ಹಂತದ ನಾಮಪತ್ರ ಸಲ್ಲಿಸಲು ಅಕ್ಟೋಬರ್ 20 ಕೊನೆಯ ದಿನವಾಗಿದೆ. ಉಮೇದುವಾರಿಕೆ ಹಿಂಪಡೆಯಲು ಕೊನೆಯ ದಿನಾಂಕ ಅಕ್ಟೋಬರ್ 23 ಆಗಿದೆ ಎಂದು ಜ್ಞಾನೇಶ್ ಕುಮಾರ್ ಹೇಳಿದ್ದಾರೆ.

ನವೆಂಬರ್ 14 ರಂದು ಮತಗಳ ಎಣಿಕೆ ನಡೆಯಲಿದೆ ಎಂದು ತಿಳಿಸಿದ್ದಾರೆ.

22 ವರ್ಷಗಳಲ್ಲಿ ಮೊದಲ ಬಾರಿಗೆ ನಡೆಸಲಾದ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಯಶಸ್ವಿಯಾಗಿ ಪಟ್ಟಿಯನ್ನು 'ಶುದ್ಧೀಕರಿಸಿದೆ' ಎಂದು ಜ್ಞಾನೇಶ್ ಕುಮಾರ್ ಹೇಳಿದ್ದಾರೆ.

### ನ.3ರಂದು ಹುಬ್ಬಳ್ಳಿಯಲ್ಲಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸುವರ್ಣ ಮಹೋತ್ಸವ ಕಾರ್ಯಕ್ರಮ

# ಅರ್ಥಪೂರ್ಣ ಆಚರಣೆಗೆ ಸಿದ್ಧತೆ ಕೈಗೊಳ್ಳಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಯಶಸ್ವಿಯಾಗಿ 50 ವರ್ಷಗಳನ್ನು ಪೂರೈಸಿದ್ದು, ಮಂಡಳಿಯ ಸುವರ್ಣಮಹೋತ್ಸವ ಕಾರ್ಯಕ್ರಮವನ್ನು ಸಾರ್ವಜನಿಕ ಜಾಗೃತಿ ಹಾಗೂ ವಿವಿಧ ಕಾರ್ಯಕ್ರಮಗಳ ಮೂಲಕ ಅರ್ಥಪೂರ್ಣವಾಗಿ ನವೆಂಬರ್ 3ರಂದು ಆಚರಿಸಲು ನಿರ್ಧರಿಸಲಾಗಿದ್ದು, ಅಧಿಕಾರಿಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕೆಂದು ಪ್ರಭಾರ ಜಿಲ್ಲಾಧಿಕಾರಿ, ಜಿ.ಪಂ ಸಿಇಓ ಭುವನೇಶ ಪಾಟೀಲ ಹೇಳಿದರು.



ಅವರು ಸೋಮವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವ ಸಮಾರಂಭ ಆಚರಿಸುವ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಈಗ ಯಶಸ್ವಿಯಾಗಿ 50 ವರ್ಷ ಪೂರೈಸಿದ್ದು, ಸುವರ್ಣಮಹೋತ್ಸವ ಕಾರ್ಯಕ್ರಮವನ್ನು ವಿವಿಧ ಸಮುದಾಯಗಳನ್ನು ತೊಡಗಿಸಿಕೊಂಡು, ಜಾಗೃತಿ ಮೂಡಿಸಲು ಕಾರ್ಯಕ್ರಮ ರೂಪಿಸಲಾಗುತ್ತಿದೆ. ಸುವರ್ಣಮಹೋತ್ಸವ ಕಾರ್ಯಕ್ರಮದ ಮೂಲಕ ಮಂಡಳಿಯ ಕಾರ್ಯ ಚಟುವಟಿಕೆಗಳ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವುದು, ಪರಿಸರ ಸಂರಕ್ಷಣಾ ಕಾನೂನುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಬಗ್ಗೆ ತಿಳುವಳಿಕೆ ಮೂಡಿಸಬೇಕು. ಈ ನಿಟ್ಟಿನಲ್ಲಿ ಕಾರ್ಯಕ್ರಮ ರೂಪಿಸಲಾಗುತ್ತದೆ ಎಂದು ಹೇಳಿದರು.

ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ಹುಬ್ಬಳ್ಳಿಯ ನೆಹರು ಕ್ರೀಡಾಂಗಣದಲ್ಲಿ ನವೆಂಬರ್ 3ರಂದು ಮಧ್ಯಾಹ್ನ 2 ಗಂಟೆಗೆ ಆಯೋಜಿಸಲು ನಿರ್ಧರಿಸಲಾಗಿದೆ. ಇದರೊಂದಿಗೆ ಪ್ರತಿ ತಾಲೂಕು ಮಟ್ಟದಲ್ಲಿ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ಸುವರ್ಣಮಹೋತ್ಸವ ಕಾರ್ಯಕ್ರಮ ಆಯೋಜಿಸಬೇಕು. ಮಾಲಿನ್ಯ ಮಂಡಳಿಯ ಅಧಿಕಾರಿಗಳು ತಾಲೂಕು ಆಡಳಿತದೊಂದಿಗೆ ಸಮನ್ವಯ ಸಾಧಿಸಿ, ಅಚ್ಚುಕಟ್ಟಾಗಿ ಕಾರ್ಯಕ್ರಮ ಸಿದ್ಧಪಡಿಸಿಕೊಳ್ಳಬೇಕೆಂದು ಅವರು ಸೂಚಿಸಿದರು.

ಕಾರ್ಯಕ್ರಮದಲ್ಲಿ ಕೈಗಾರಿಕೋದ್ಯಮಿಗಳು, ಪರಿಸರವಾದಿಗಳು, ವಿದ್ಯಾರ್ಥಿಗಳು, ಜನ ಪ್ರತಿನಿಧಿಗಳು, ಸರ್ಕಾರಿ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು, ಸಂಘಸಂಸ್ಥೆಗಳು ಹಾಗೂ ಇತರೆ ಭಾಗಿದಾರರ ಸಹಭಾಗಿತ್ವದಲ್ಲಿ ಜಿಲ್ಲೆಯಾದ್ಯಂತ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸುವರ್ಣಮಹೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತದೆ. ಅಧಿಕಾರಿಗಳು ಸಿದ್ಧತೆ ಪೂರ್ಣಗೊಳಿಸಿ, ವರದಿ ಸಲ್ಲಿಸಬೇಕೆಂದು ಭುವನೇಶ ಪಾಟೀಲ ಹೇಳಿದರು.

ಜಿಲ್ಲೆಯ ನಗರ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲ ಜನಸಾಮಾನ್ಯರನ್ನು ತಲುಪುವಂತೆ ಸ್ಥಳೀಯ ಪರಿಸರ ಮಾಲಿನ್ಯ ಸಮಸ್ಯೆಗಳಾದ ಘನ ತ್ಯಾಜ್ಯ ನಿರ್ವಹಣೆ, ಜಲ ಮಾಲಿನ್ಯ, ಇ–ತ್ಯಾಜ್ಯ, ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ಕುರಿತು ವಿಶೇಷ ಉಪನ್ಯಾಸ, ವಿವಿಧ ಸ್ಪರ್ಧೆಗಳನ್ನು, ಬೀದಿ ನಾಟಕ, ಮಕ್ಕಳ ಭಾಷಣ ಆಯೋಜಿಸಲು ಕ್ರಮ ವಹಿಸಬೇಕೆಂದು ಅವರು ತಿಳಿಸಿದರು. ಹಿರಿಯ ಪರಿಸರ ಅಧಿಕಾರಿ ಜಗದೀಶ ಐ.ಎಚ್. ಸ್ವಾಗತಿಸಿ, ಸಭೆ ನಿರ್ವಹಿಸಿದರು.

ಸಭೆಯಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಕಾಣಕೋಣಕರ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್. ಹೊನಕೇರಿ, ಸಹಾಯಕ ಅರಣ್ಯಾಧಿಕಾರಿ ಪರಿಮಳ, ಪಿಯು ಉಪನಿರ್ದೇಶಕಿ ತೇಜಸ್ವಿನಿ ನಾರಾಯಣಕರ, ಶಾಲಾ ಶಿಕ್ಷಣ ಇಲಾಖೆ ಅಧಿಕಾರಿ ಡಾ. ರೇಣುಕಾ ಅಮಲಜೇರಿ, ಪರಿಸರ ನಾಗರಿಕ ಸಮಿತಿ ಅಧ್ಯಕ್ಷ ಶಂಕರ ಕುಂಬಿ, ಎಲ್.ಆರ್. ನಾಯಕ ಸೇರಿದಂತೆ ವಿವಿಧ ತಾಲೂಕುಗಳ ಇಓ ಅವರು, ಇಲಾಖೆಗಳ ಅಧಿಕಾರಿಗಳು, ಸರ್ಕಾರೇತರ ಸಂಘ–ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

## ಶಬರಿಮಲೆ ಚಿನ್ನ ಕಳವು ಪ್ರಕರಣ: ಎಸ್‌ಐಟಿ ತನಿಖೆಗೆ ಕೇರಳ ಹೈಕೋರ್ಟ್ ಆದೇಶ

■ವಿಜಯಸಾಕ್ಷಿ ಸುದ್ದಿ, ಕೇರಳ

ಶಬರಿಮಲೆ ಶ್ರೀ ಧರ್ಮ ಶಾಸ್ತ ದೇವಸ್ಥಾನದಲ್ಲಿನ ಚಿನ್ನ ಲೇಪಿತ ದ್ವಾರಪಾಲಕ ವಿಗ್ರಹಗಳಿಂದ 4.54 ಕೆಜಿ ಚಿನ್ನ ಕಳುವಾಗಿದೆ ಎಂಬ ಆರೋಪದ ಬಗ್ಗೆ ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ತನಿಖೆ ನಡೆಸಲು ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಲು ಕೇರಳ ಹೈಕೋರ್ಟ್ ನಿರ್ದೇಶನ ನೀಡಿದೆ.

ನ್ಯಾಯಮೂರ್ತಿ ರಾಜಾ ವಿಜಯರಾಘವನ್ ವಿ ಮತ್ತು ನ್ಯಾಯಮೂರ್ತಿ ಕೆ.ವಿ. ಜಯಕುಮಾರ್ ಅವರನ್ನೊಳಗೊಂಡ ವಿಭಾಗೀಯ ಪೀಠವು, ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಎಚ್. ವೆಂಕಟೇಶ್ ಅವರನ್ನು ಎಸ್‌ಐಟಿಯ ನೇತೃತ್ವ ವಹಿಸಲು ನೇಮಿಸಿತು. ಸಹಾಯಕ ನಿರ್ದೇಶಕ (ಆಡಳಿತ) ಶಶಿಧರನ್ ಎಸ್. ಐಪಿಎಸ್, ವಿವಿಧ ಠಾಣೆಗಳ ಇನ್ಸ್‌ಪೆಕ್ಟರ್‌ಗಳು ಮತ್ತು ಸಹಾಯಕ ಸಬ್–ಇನ್ಸ್‌ಪೆಕ್ಟರ್‌ಗಳು ಸೇರಿದಂತೆ ಇತರ ಪೊಲೀಸ್ ಅಧಿಕಾರಿಗಳ ಸಹಾಯ ಪಡೆಯಲಾಯಿತು. ಎಸ್‌ಐಟಿ ಪತ್ರಿಕಾ ಅಥವಾ ಸಾರ್ವಜನಿಕರೊಂದಿಗೆ ಸಂವಹನ ನಡೆಸಬಾರದು, ಒಂದು ತಿಂಗಳೊಳಗೆ ತನಿಖೆಯನ್ನು ಪೂರ್ಣಗೊಳಿಸಬಾರದು ಎಂದು ನ್ಯಾಯಾಲಯ ಒತ್ತಿ ಹೇಳಿದೆ ಎಂದು 'ಬಾರ್ ಮತ್ತು ಬೆಂಚ್' ವರದಿ ಮಾಡಿದೆ.

## ಸ್ವಸಹಾಯ ಸಂಘಗಳ 'ಅಕ್ಕ ಕಫೆ' ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಜ್ಯದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ರಾಷ್ಟ್ರೀಯ ಜೀವನೋಪಾಯ ಅಭಿಯಾನವನ್ನು ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಅಭಿಯಾನದಡಿ ಸ್ವ–ಸಹಾಯ ಗುಂಪುಗಳ ಮಹಿಳೆಯರೇ ನಿರ್ವಹಿಸಲು ಅವಕಾಶವಾಗುವಂತೆ ಅಕ್ಕ ಕಫೆ ರೂಪಿಸಲಾಗಿದ್ದು, ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಇದು ದೊಡ್ಡ ಕೊಡುಗೆ ನೀಡಲಿದೆ ಎಂದು ಕಾರ್ಮಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್.ಲಾಡ್ ಹೇಳಿದರು.

ಅವರು ಜಿಲ್ಲಾ ಪಂಚಾಯಿತಿ ಬಳಿಯ ಕಟ್ಟಡದಲ್ಲಿ ಕಬ್ಬೆನೂರು ಗ್ರಾಮದ ಕಾಮಧೇನು ಮಹಿಳಾ ಸ್ವ–ಸಹಾಯ ಸಂಘ ಆರಂಭಿಸಿರುವ ಅಕ್ಕ ಕಫೆ ಉದ್ಘಾಟಿಸಿ ಮಾತನಾಡಿದರು.

ಮಹಿಳೆಯರ ಜೀವನೋಪಾಯ ಚಟುವಟಿಕೆಗಳಿಗೆ ಹೆಚ್ಚಿನ ಉತ್ತೇಜನ ನೀಡುವಲ್ಲಿ ರಾಜ್ಯ ಸರ್ಕಾರವು 2024–25ನೇ ಸಾಲಿನ ಆಯವ್ಯಯದಲ್ಲಿ ಅಕ್ಕ ಕಫೆ ಕಾರ್ಯಕ್ರಮವನ್ನು ಘೋಷಿಸಿದೆ. ಸರ್ಕಾರದ ಆದೇಶದಂತೆ ಗ್ರಾಮೀಣ ಪ್ರದೇಶದಲ್ಲಿ ಸ್ಥಳೀಯ ಆಹಾರವನ್ನು ಶುಚಿರುಚಿಯಾಗಿ ಕೈಗೆಟಕುವ ದರದಲ್ಲಿ ಒದಗಿಸಲು ಮಹಿಳೆಯರೇ ನಡೆಸುವ 50 ಕೆಫೆ ಸಂಜೀವಿನಿ (ಅಕ್ಕ ಕೆಫೆ) ಕ್ಯಾಂಟೀನ್‌ಗಳನ್ನು ಸ್ಥಾಪಿಸಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ. ಅದರಂತೆ ಧಾರವಾಡ ಜಿಲ್ಲೆಯ ಜಿಲ್ಲಾ ಕೇಂದ್ರ ಸ್ಥಾನ ಮತ್ತು ಎಲ್ಲ ತಾಲೂಕು ಕೇಂದ್ರ ಸ್ಥಾನಗಳಲ್ಲಿ ಅಕ್ಕ ಕೆಫೆಯನ್ನು ಆರಂಭಿಸಲಾಗುತ್ತಿದೆ ಎಂದು ಸಚಿವರರು ತಿಳಿಸಿದರು.

ಈ ಸಂದರ್ಭದಲ್ಲಿ ನವಲಗುಂದ ಶಾಸಕ ಎನ್.ಎಚ್. ಕೋನರಡ್ಡಿ, ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ್, ಪ್ರಭಾರ ಜಿಲ್ಲಾಧಿಕಾರಿ, ಜಿ.ಪಂ ಸಿಇಓ ಭುವನೇಶ ದೇವಿದಾಸ ಪಾಟೀಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ ಆರ್ಯ, ಪ್ರೊಬೆಷನರಿ ಐಎಎಸ್ ಅಧಿಕಾರಿ ರಿತಿಕಾ ವರ್ಮಾ, ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಕಾಮಧೇನು ಮಹಿಳಾ ಸ್ವ–ಸಹಾಯ ಸಂಘದ ಅಧ್ಯಕ್ಷೆ ರಾಜಶ್ರೀ ಮಂಜುನಾಥ ಪವಾಡಿ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು, ಸ್ವಸಹಾಯ ಸಂಘಗಳ ಸದಸ್ಯೆಯರು, ಸಾರ್ವಜನಿಕರು ಉಪಸ್ಥಿತರಿದ್ದರು.

### ಶ್ರೀ ಅಡವೀಂದ್ರಸ್ವಾಮಿ ಮಠದಲ್ಲಿ ಆಯುಧ ಪೂಜೆ, ಪುರಾಣ ಮಂಗಲೋತ್ಸವ

# ಶ್ರೀದೇವಿಯ ಆರಾಧನೆಯಿಂದ ಸಂತೃಪ್ತ ಜೀವನ




ಅಡವೀಂದ್ರಸ್ವಾಮಿ ಮಠದಲ್ಲಿ ಸುಮಾರು 45 ವರ್ಷಗಳಿಂದಲೂ ಶ್ರೀ ಅನ್ನಪೂರ್ಣೇಶ್ವರಿ ಹಾಗೂ ಶ್ರೀದೇವಿಯ ಆರಾಧನೆ ನಡೆದುಕೊಂಡು ಬಂದಿರುವುದು ಇತಿಹಾಸ. ಅಷ್ಟೂ ವರ್ಷಗಳಿಂದ ಎಲ್ಲ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಸೇವೆ ಸಲ್ಲಿಸಿರುವ ಎಲ್ಲರೂ ಅಭಿನಂದನಾರ್ಹರು. ನಾಡಿನ ಮಹಿಳೆಯರು ಅದರಲ್ಲೂ ಗದಗ–ಬೆಟಗೇರಿಯ ಯುವ ಜನರು ದಸರಾ ಮಹೋತ್ಸವದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಿದ್ದಾರೆ. ಅವರಿಗೆಲ್ಲ ಶ್ರೀದೇವಿಯ ಅನುಗ್ರಹವಾಗಲಿ ಎಂದು ರೇಣುಕಾಚಾರ್ಯ ಮಂದಿರದ ಚಂದ್ರಶೇಖರ ದೇವರು ಶುಭ ಕೋರಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ನವರಾತ್ರಿಯ ಸಂದರ್ಭದಲ್ಲಿ ಶ್ರೀದೇವಿಯ ಆರಾಧನೆಯಿಂದ ಮನುಷ್ಯ ಜನ್ಮದಲ್ಲಿ ನೆಮ್ಮದಿ ಹಾಗೂ ಸಂತೃಪ್ತ ಜೀವನ ಹೊಂದಲು ಸಾಧ್ಯ ಎಂದು ಗದಗ ರೇಣುಕಾಚಾರ್ಯ ಮಂದಿರದ ಚಂದ್ರಶೇಖರ ದೇವರು ಹೇಳಿದರು.

ನಗರದ ಮುಳಗುಂದ ನಾಕಾ ಬಳಿಯ ಶ್ರೀ ಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವ, ಕುಮಾರಿಕಾ ಪೂಜೆ ಹಾಗೂ ಶ್ರೀದೇವಿ ಪುರಾಣ ಮಂಗಲೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಸಮ್ಮುಖ ವಹಿಸಿದ್ದ ಶ್ರೀಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಆಯುಧ ಪೂಜೆ, ಕುಮಾರಿಕಾ ಪೂಜೆ ಶ್ರೀದೇವಿಯ ಆರಾಧನೆ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಚನ್ನಯ್ಯ ತೆ–ೂಟಯ್ಯ ಹಿರೇಮಠ, ಶೈಲಾ ಶಂಕರಲಿಂಗಪ್ಪ ಕೊಡೇಕಲ್, ನಗರಸಭೆ ಸದಸ್ಯರಾದ ರಾಘವೇಂದ್ರ ಬಸವರಾಜ ಯಳವತ್ತಿ, ಅನುಷಾ ರಾಘವೇಂದ್ರ ಯಳವತ್ತಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರಲ್ಲದೇ, ಶ್ರೀಗಳಿಂದ ಗುರುರಕ್ಷೆ ಪಡೆದರು.

ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಗೌರವಾಧ್ಯಕ್ಷ ಎಸ್.ಪಿ. ಸಂಶಿಮಠ, ಅಧ್ಯಕ್ಷ ಸದಾಶಿವಯ್ಯ ಮದರಿಮಠ, ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ಗುಡಿಮನಿ, ಮಹಿಳಾ ಸಮಿತಿ ಅಧ್ಯಕ್ಷರಾದ ಸುವರ್ಣಾ ಮದರಿಮಠ ಮುಂತಾದವರು ವೇದಿಕೆಯಲ್ಲಿದ್ದರು.

ಶ್ರೀಅನ್ನಪೂರ್ಣೇಶ್ವರ ಸನ್ನಿಧಿಯಲ್ಲಿ ಡಾ. ರಾಜಗುರು ಗುರುಸ್ವಾಮಿ ಕಲಕೇರಿ ಅವರಿಂದ ನವರಾತ್ರಿಯ ಅಂಗವಾಗಿ ನಡೆದುಬಂದ 45ನೇ ವರ್ಷದ ಶ್ರೀದೇವಿ ಪುರಾಣ ಪ್ರವಚನ ಮಂಗಲೋತ್ಸವ ಜರುಗಿತು. ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ಪುರಾಣ ಪಠಿಸಿದರು. ಪಕ್ರುಸಾಬ ಮುಲ್ಲಾ, ಜಗನ್ನಾಥ ಕಲಬುರಗಿ, ಶರಣಕುಮಾರ ಗುತ್ತರಗಿ, ಎಸ್.ಬಿ. ಭಜಂತ್ರಿ ಸಂಗೀತ ಸೇವೆ ನೀಡಿದರು.

ಪೂಜಾ ಸಮಿತಿ ಅಧ್ಯಕ್ಷ ಶರಣಯ್ಯಸ್ವಾಮಿ ಶಿವಪ್ಪಯ್ಯನಮಠ, ವೀರೇಶ್ವರ ಸ್ವಾಮಿಗಳು ಹೊಸಳ್ಳಿಮಠ, ಜಾತ್ರಾ ಮಹೋತ್ಸವ ಸಮಿತಿ ಕಾರ್ಯದರ್ಶಿ ಗೀತಾ ಎಂ.ಹೂಗಾರ, ಸಹಕಾರ್ಯದರ್ಶಿ ಸುಷ್ಮಾ ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ನೀಲಗುಂದ, ವಿ.ಎಚ್. ದೇಸಾಯಿಗೌಡ್ರ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

ಸಮಾರಂಭದಲ್ಲಿ ವಿವಿಧ ಭಕ್ತಿಸೇವೆ ವಹಿಸಿದ್ದ ಮಂಜುನಾಥ ಹಿರೇಗೌಡ್ರ, ಯು.ಆರ್. ಭೂಸನೂರಮಠ, ಎಲ್.ಎಸ್. ನೀಲಗುಂದ ಅವರಿಗೆ ಗುರುರಕ್ಷೆ ನೀಡಲಾಯಿತು. ಜ್ಯೋತಿ ರಾಜೇಂದ್ರ ಗಡಾದ ಸ್ವಾಗತಿಸಿದರು. ಪ್ರಭುಗೌಡ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಪ್ರಕಾಶ ಬಂಡಿ ವಂದಿಸಿದರು.

## ಭೀಕರ ಸರಣಿ ರಸ್ತೆ ಅಪಘಾತ: ಇಬ್ಬರು ದುರ್ಮರಣ, ಹಲವರಿಗೆ ಗಂಭೀರ ಗಾಯ

■ವಿಜಯಸಾಕ್ಷಿ ಸುದ್ದಿ, ಕೋಲಾರ

ಭೀಕರ ರಸ್ತೆ ಸರಣಿ ಅಪಘಾತದಲ್ಲಿ ಇಬ್ಬರು ಸಾವನ್ನಪ್ಪಿದ್ದು, ಹಲವರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಚೆನ್ನೈ–ಬೆಂಗಳೂರು ಎಕ್ಸ್‌ಪ್ರೆಸ್ ವೇಯಲ್ಲಿ ಜರುಗಿದೆ. ಘಟನೆಯಲ್ಲಿ ಸುಮಾರು 10ಕ್ಕೂ ಹೆಚ್ಚು ಜನರಿಗೆ ಗಂಭೀರ ಗಾಯಗಳಾಗಿದ್ದು, ಬಂಗಾರಪೇಟೆ, ಕೆಜಿಎಫ್ ಹಾಗೂ ಕೋಲಾರ ಆಸ್ಪತ್ರೆಗೆ ರವಾಸಲಾಗಿದೆ. ಬೆಂಗಳೂರು–ಚೆನ್ನೈ ಎಕ್ಸ್‌ಪ್ರೆಸ್ ವೇನಲ್ಲಿ ಟೆಂಪೋ ವಾಹನಕ್ಕೆ ಈಚರ್ ವಾಹನ ಡಿಕ್ಕಿ ಹೊಡೆದ ರಭಸಕ್ಕೆ ಟೆಂಪೋ, ಆಂಬುಲೆನ್ಸ್‌ಗೆ ಡಿಕ್ಕಿ ಹೊಡೆದು ಸರಣಿ ಅಪಘಾತ ಸಂಭವಿಸಿದೆ. ಆಂಬುಲೆನ್ಸ್ ಚಾಲಕ ವಿಕ್ರಮ್ ಪಾಲ್ ಮತ್ತು ಟೆಂಪೋ ಚಾಲಕ ಶಿವರಾಜ್ ಮೃತರು.

ಟೆಂಪೋದಲ್ಲಿ ಬೆಂಗಳೂರಿನ ಎಸ್ಕೆಸಿ ಕ್ಯಾಟರಿಂಟ್ನ 15 ಜನ ಸಿಬ್ಬಂದಿ ಪ್ರಯಾಣಿಸುತ್ತಿದ್ದರು. ಸುಮಾರು ಹತ್ತಕ್ಕೂ ಹೆಚ್ಚು ಜನರಿಗೆ ಗಾಯಗಳಾಗಿವೆ.

# ಕೃಷಿ ಇಲಾಖೆಯಿಂದ ಬೀಜ ವಿತರಣೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

2025–26ನೇ ಸಾಲಿನಲ್ಲಿ, ಧಾರವಾಡ ಜಿಲ್ಲೆಯಲ್ಲಿ ಹಿಂಗಾರು ಹಂಗಾಮಿನ ಬಿತ್ತನೆ ಬೀಜಗಳನ್ನು ವಿತರಿಸಲು ಒಟ್ಟು 14 ರೈತ ಸಂಪರ್ಕ ಕೇಂದ್ರಗಳು ಹಾಗೂ 13 ಹೆಚ್ಚುವರಿ ಬೀಜ ವಿತರಣಾ ಕೇಂದ್ರಗಳನ್ನು ಒಳಗೊಂಡಂತೆ ಒಟ್ಟು 27 ಬೀಜ ವಿತರಣಾ ಕೇಂದ್ರಗಳನ್ನು ಗುರುತಿಸಲಾಗಿದೆ ಎಂದು ಕಾರ್ಮಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದರು.



ಅವರು ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಕೃಷಿ ಇಲಾಖೆಯಿಂದ ಪ್ರಸಕ್ತ ಸಾಲಿನ ಹಿಂಗಾರು ಹಂಗಾಮಿಗೆ ವಿತರಿಸುವ ವಿವಿಧ ಬೀಜಗಳನ್ನು ರೈತರಿಗೆ ವಿತರಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿದ್ದು, ಹಿಂಗಾರು ಬಿತ್ತನೆ ಪ್ರಾರಂಭವಾಗಿದೆ. ಕೃಷಿ ಇಲಾಖೆಯು ಹಿಂಗಾರು ಹಂಗಾಮಿಗೆ ಕಡಲೆ, ಗೋಧಿ, ಜೋಳ, ಮೆಕ್ಕೆಜೋಳ, ಶೇಂಗಾ ಹಾಗೂ ವಿವಿಧ ಬೆಳೆಗಳ ಬೀಜಗಳನ್ನು ರಿಯಾಯಿತಿ ದರದಲ್ಲಿ ರೈತರಿಗೆ ಮಾರಾಟ ಮಾಡಲಾಗುತ್ತಿದೆ. ರೈತರು ಇದರ ಸದುಪಯೋಗ ಪಡೆಯಬೇಕೆಂದು ಹೇಳಿದರು.

ರೈತರು ಕಡಲೆ, ಗೋಧಿ, ಜೋಳ, ಮೆಕ್ಕೆಜೋಳ, ಶೇಂಗಾ ಹಾಗೂ ವಿವಿಧ ಬೆಳೆಗಳನ್ನು ಹಿಂಗಾರು ಹಂಗಾಮಿನಲ್ಲಿ ಬಿತ್ತನೆ ಮಾಡುತ್ತಾರೆ. ಹಾಗಾಗಿ ಇಲಾಖೆ ವತಿಯಿಂದ ಸಹಾಯಧನದಡಿ ಬೀಜ ವಿತರಣೆ ಮಾಡಲು ಒಟ್ಟು 29,906 ಕ್ವಿಂಟಲ್ ಬಿತ್ತನೆ ಬೀಜ ವಿತರಣೆ ಗುರಿಯನ್ನು ಹೊಂದಲಾಗಿದೆ. ಈಗಾಗಲೇ ವಿವಿಧ ಇನ್ನಿತರೆ ಬೀಜ ಉತ್ಪಾದನಾ ಸಂಸ್ಥೆಗಳ ಬೀಜಗಳನ್ನು ಎಲ್ಲ ಬೀಜ ವಿತರಣಾ ಕೇಂದ್ರಗಳಲ್ಲಿ ದಾಸ್ತಾನು ಮಾಡಲಾಗಿದ್ದು ವಿತರಣೆ ಪ್ರಾರಂಭವಾಗಿದೆ ಎಂದು ಸಚಿವರು ಹೇಳಿದರು.

ಈ ಸಂದರ್ಭದಲ್ಲಿ ಶಾಸಕ ಎನ್.ಎಚ್. ಕೋನರಡ್ಡಿ, ಪ್ರಭಾರ ಜಿಲ್ಲಾಧಿಕಾರಿ, ಜಿ.ಪಂ ಸಿಇಓ ಭುವನೇಶ ಪಾಟೀಲ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ ಸೇರಿದಂತೆ ಕೃಷಿ ಇಲಾಖೆ ಅಧಿಕಾರಿಗಳು, ರೈತ ಮುಖಂಡರು, ರೈತರು ಇದ್ದರು.

### ಗ್ರಾಮ ದೇವತೆ ದೇವಸ್ಥಾನದಲ್ಲಿ ದೇವಿ ಪುರಾಣ ಮುಕ್ತಾಯದ ಧರ್ಮಸಭೆಯಲ್ಲಿ ಶ್ರೀ ಪಂಚಾಕ್ಷರ ಶಿವಾಚಾರ್ಯರು

# ಅರಿಷಡ್ವರ್ಗಗಳನ್ನು ತ್ಯಜಿಸುವುದೇ ವಿಜಯದಶಮಿಯ ಸಂದೇಶ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಚಿದಾನಂದ ಅವಧೂತರು ರಚಿಸಿದ ದೇವಿ ಪುರಾಣದ 18ನೇ ಅಧ್ಯಾಯದಲ್ಲಿ ದುಷ್ಟರನ್ನು ಸಂಹರಿಸಿ ದೇವಿಯು ವಿಜಯವನ್ನು ಸಾಧಿಸಿದಳು ಎಂಬ ಪುರಾಣದ ಕೊನೆಯ ದಿನದ ಸಂದೇಶವೇ ಮನುಷ್ಯನಲ್ಲಿರುವ ಅರಿಷಡ್ವರ್ಗಗಳನ್ನು ತ್ಯಜಿಸಿ ವಿಜಯದಶಮಿಯನ್ನು ಆಚರಿಸುವುದಾಗಿದೆ ಎಂದು ಅಡ್ನೂರ ರಾಜೂರ ಬ್ರಹನ್ಮಠದ ಪಂಚಾಕ್ಷರ ಶಿವಾಚಾರ್ಯರು ಅಭಿಪ್ರಾಯಪಟ್ಟರು.



ಇಲ್ಲಿಯ ಗ್ರಾಮ ದೇವತೆ ದೇವಸ್ಥಾನದಲ್ಲಿ ನವರಾತ್ರಿ ಅಂಗವಾಗಿ ಹಮ್ಮಿಕೊಂಡಿದ್ದ ದೇವಿ ಪುರಾಣ ಮುಕ್ತಾಯದ ಧರ್ಮಸಭೆಯ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ದೇವಿ ಪುರಾಣದ ಕಥೆಯಲ್ಲಿ ಬರುವ ರಾಕ್ಷಸರು ಕಿವಿಯ ಮೂಲಕ ಜನಿಸಿದವರು. ಅಂದರೆ ಈ ಪುರಾಣವನ್ನು ನಾವು ಕಿವಿಯಿಂದ ಶ್ರವಣ ಮಾಡುತ್ತೇವೆ. ದೇವಿಯು ಧರ್ಮದ ಸ್ಥಾಪನೆಗಾಗಿ ರಾಕ್ಷಸರನ್ನು ಸಂಹರಿಸಿ ವಿಜಯ ಸಾಧಿಸಿದಂತೆ ಪುರಾಣದಲ್ಲಿ ಸಕಾರಾತ್ಮಕ ಅಂಶಗಳನ್ನು ಅಳವಡಿಸಿಕೊಂಡು ನಮ್ಮಲ್ಲಿರುವ ಅರಿಷಡ್ವರ್ಗಗಳನ್ನು ನಾಶಪಡಿಸಿಕೊಂಡು ವಿಜಯದಶಮಿಯನ್ನು ಆಚರಿಸಬೇಕು. ಅಂದಾಗ ಮಾತ್ರ ಪುರಾಣ ಆಲಿಸಿದ್ದು ಸಾರ್ಥಕವಾಗುತ್ತದೆ ಎಂದು ಸಲಹೆ ನೀಡಿದರು.

ಮಾಜಿ ಯೋಧ ದತ್ತಾತ್ರೇಯ ಜೋಶಿ ಮಾತನಾಡಿ, ನಮ್ಮ ಸನಾತನ ಸಂಸ್ಕೃತಿಯ ಹಬ್ಬದ ಆಚರಣೆಗಳು ವೈಜ್ಞಾನಿಕತೆಯಿಂದ ಕೂಡಿವೆ. ನಮ್ಮ ಜೀವನದ ಮೌಲ್ಯ, ನೈತಿಕತೆ, ರಾಷ್ಟ್ರೀಯತೆ, ಆಚಾರ– ವಿಚಾರಗಳನ್ನು ಅರಿತುಕೊಂಡು ಹಬ್ಬಗಳನ್ನು ಆಚರಿಸಬೇಕು. ನಮ್ಮ ಪೂರ್ವಜರ ವೈವಿಧ್ಯತೆಯ ಕಾರ್ಯಕ್ರಮಗಳನ್ನು ಕೇವಲ ಕಾಟಾಚಾರಕ್ಕೆ ಆಚರಿಸದೇ ಅದರಲ್ಲಿ ಮೌಲ್ಯಗಳನ್ನು ತಿಳಿದುಕೊಳ್ಳಬೇಕು ಎಂದರು.

ಐತಿಹಾಸಿಕ ಲಕ್ಕುಂಡಿ ಗ್ರಾಮವು ಧಾರ್ಮಿಕ, ಸಾಂಸ್ಕೃತಿಕ ಗ್ರಾಮವಾಗಿದೆ. ಪುರಾತನ ಕಾಲದಿಂದಲೂ ಇಲ್ಲಿ ದಾರ್ಮಿಕ ಕಾರ್ಯಕ್ರಮಗಳು ವಿಶಿಷ್ಠವಾಗಿ ನಡೆದು ಬಂದಿವೆ. ಇದರ ನೆನೆಪಿನ ಸಂಕೇತಗಳೇ ಇಲ್ಲಿರುವ ದೇವಾಲಯಗಳು ಮತ್ತು ಕಲ್ಯಾಣಿಗಳು. ಇವುಗಳನ್ನು ಅಭಿವೃದ್ಧಿಪಡಿಸಲು ಕಳೆದ ಎರಡು ವರ್ಷಗಳಿಂದ ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲರು ಶಾಸಕ ಸಿ.ಸಿ. ಪಾಟೀಲರ ಸಹಕಾರದಿಂದ 5 ಕೋಟಿ ರೂ ವೆಚ್ಚದಲ್ಲಿ 13 ಸ್ಮಾರಕಗಳನ್ನು ಪುನರುಜ್ಜೀವನಗೊಳಿಸಿದ್ದಾರೆ. ಮತ್ತೆ ಈಗ 18 ಕೋಟಿ ರೂಗಳು ಬಿಡುಗಡೆಯಾಗಿದ್ದು, ಮುಂದಿನ ದಿನಗಳಲ್ಲಿ ವಿಶ್ವ ಪರಂಪರೆ ಪಟ್ಟಿಗೆ ಸೇರಿಸಿ ಪ್ರವಾಸೋದ್ಯಮ ಕೇಂದ್ರವನ್ನಾಗಿ ರೂಪಿಸಿ ಉದ್ಯೋಗ ಸೃಷ್ಟಿಗೆ ಪ್ರಯತ್ನಿಸಲಾಗುತ್ತಿದೆ. ಈ ಗ್ರಾಮವನ್ನು ಮಾದರಿ ಗ್ರಾಮವನ್ನಾಗಿ ರೂಪಿಸಲು ಸಹಕಾರ ನೀಡಬೇಕೆಂದು ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ ವಿನಂತಿಸಿಕೊಂಡರು.

ಪುರಾಣಕ್ಕೆ ಸಹಾಯ ಹಾಗೂ ಸೇವೆ ಸಲ್ಲಿಸಿದ ಮಹನೀಯರನ್ನು ಸನ್ಮಾನಿಸಲಾಯಿತು. ವಿಶ್ವನಾಥ ಶಾಸ್ತ್ರಿಗಳು ಪುರಾಣ ಪ್ರವಚನ ಮಂಗಲ ಮಾಡಿದರು. ಷಡಕ್ಷರಯ್ಯ ಬದ್ನಿಮಠ ಪಠಣ ಮಾಡಿದರು. ಶಂಕ್ರಪ್ಪ ಬಣವಿ, ಮಲ್ಲಪ್ಪ ಕಲ್ಲೂರ, ಬಸನಗೌಡ ಪಾಟೀಲ ಸಂಗೀತ ಸೇವೆ ನೀಡಿದರು. ಕುಬೇರಗೌಡ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಗ್ರಾ.ಪಂ ಸದಸ್ಯರಾದ ಅನಸಮ್ಮ ಅಂಬಕ್ಕಿ, ಫಕ್ಕೀರವ್ವ ಬೇಲೇರಿ, ಸೇವಾ ಸಮಿತಿ ಅಧ್ಯಕ್ಷ ಪ್ರಕಾಶ ಅರಹುಣಶಿ, ಬಸವರಾಜ ಭೂಮಣ್ಣವರ, ಅಶೋಕ ಬೂದಿಹಾಳ, ಅಶೋಕ ಬಡಿಗೇರ, ಚಂದ್ರು ಬಣವಿ, ಸುರೇಶ ಬಡಿಗೇರ, ಕುಬೇರಪ್ಪ ಕಾಳಪ್ಪ ಬಡಿಗೇರ ವೇದಿಕೆಯಲ್ಲಿದ್ದರು.

# ಬಿತ್ತನೆ ಬೀಜ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಹಿಂಗಾರು ಹಂಗಾಮಿನ ಕಡಲೆ ಹಾಗೂ ಜೋಳ ಬೆಳೆಯ ರಿಯಾಯತಿ ದರದ ಬಿತ್ತನೆ ಬೀಜಗಳನ್ನು ಮುಳಗುಂದ ಕೃಷಿ ಕೇಂದ್ರದಲ್ಲಿ ಸಹಾಯ ಕೃಷಿ ಅಧಿಕಾರಿ ಎಫ್.ಸಿ. ಗುರಿಕಾರ ವಿತರಿಸಿದರು. ಈ ಸಂದರ್ಭದಲ್ಲಿ ಅವರು ಮಾತನಾಡಿ, ರಿಯಾಯತಿ ದರದಲ್ಲಿ ದೊರೆಯುವ ಹಿಂಗಾರು ಹಂಗಾಮಿನ ಕಡಲೆ ಹಾಗೂ ಜೋಳದ ಬೀಜಗಳು ಲಭ್ಯವಿದ್ದು, ರೈತರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದರು.

ಶೇಖರ ನಾಯ್ಕ, ಕಾಶಿಮಸಾಬ ಹಾದಿಮನಿ, ಮಂಜುನಾಥ ಕರಿಗಾರ, ರೈತರಾದ ಕಿರಣ ಕುಲಕರ್ಣಿ, ಮಾಹಾಂತೇಶ ಗುಂಜಳ, ಬಸವರಾಜ ಕರಿಗಾರ, ಮುತ್ತಪ್ಪ ಪಲ್ಲೇದ ಇದ್ದರು.

# ಹಳೆಯ ವಿದ್ಯಾರ್ಥಿಗಳ ಸಭೆ ನಾಳೆ

▶▶ ಮೊದಲನೇ ಪುಟದಿಂದ

ವಿದ್ಯಾಲಯ ಹೈಸ್ಕೂಲ್‌ನ ಶತಮಾನೋತ್ಸವ ಆಚರಿಸುವ ಕುರಿತು ಚರ್ಚಿಸಲಾಗುವದು. ಶಾಲೆಯಲ್ಲಿ ಕಲಿತ ಎಲ್ಲ ವಿದ್ಯಾರ್ಥಿಗಳು ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸಲಹೆ-ಸೂಚನೆಗಳನ್ನು ನೀಡಬೇಕೆಂದು ಹಳೆಯ ವಿದ್ಯಾರ್ಥಿಗಳಾದ ಓಂಪ್ರಕಾಶ ಜೈನ್, ರಮೇಶ ನವಲೆ, ಬಸವೇಶ ಮಹಾಂತಶೆಟ್ಟರ, ಅರವಿಂದ ದೇಶಪಾಂಡೆ, ಗಂಗಾಧರ ಪುರಾಣಿಕಮಠ, ಈರಣ್ಣ ಅಂಕಲಕೋಟಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

### ಗದಗ ಜಿಲ್ಲಾ ಮಟ್ಟದ ಅನುದಾನಿತ ಕಾಲೇಜುಗಳ ನೌಕರರ ಜಾಗೃತಿ ಸಭೆಯಲ್ಲಿ ಜಿ. ಹನುಮಂತಪ್ಪ ಹೇಳಿಕೆ

# ಹೋರಾಟ ಯಶಸ್ವಿಯಾಗಲು ಸಂಘಟನೆ ಅತ್ಯಗತ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ನೂತನ ಪಿಂಚಣಿ ಯೋಜನೆಯಿಂದಾಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಪಿಂಚಣಿ ಯೋಜನೆ ಕಡಿತಗೊಳಿಸಿ ಸರಕಾರ ತಾರತಮ್ಯ ನೀತಿ ಅನುಸರಿಸುತ್ತಿದೆ. ಈ ನೀತಿಯನ್ನು ಬಲವಾಗಿ ಪ್ರತಿಭಟಿಸುವ ಮೂಲಕ ಹಕ್ಕು ಪಡೆಯಲು ರಾಜ್ಯದಾದ್ಯಂತ ನೌಕರರು ಒಗ್ಗಟ್ಟಿನೊಂದಿಗೆ ಸಂಘವನ್ನು ಬಲವರ್ಧನೆಗೊಳಿಸಿ ನ್ಯಾಯವನ್ನು ಪಡೆಯಬೇಕಿದೆ ಎಂದು ಅಖಿಲ ಕರ್ನಾಟಕ ಅನುದಾನಿತ ಶಾಲಾ-ಕಾಲೇಜುಗಳ ನೌಕರರ ಸಂಘದ ರಾಜ್ಯ ಅಧ್ಯಕ್ಷ ಜಿ. ಹನುಮಂತಪ್ಪ ಹೇಳಿದರು.

ಅವರು ರವಿವಾರ ನಗರದ ಮುನ್ಸಿಪಲ್ ಕಾಲೇಜು ಆವರಣದಲ್ಲಿ ಕರ್ನಾಟಕ ರಾಜ್ಯ ಪಿಂಚಣಿ ವಂಚಿತ ಹಾಗೂ ಅಖಿಲ ಕರ್ನಾಟಕ ಅನುದಾನಿತ ಶಾಲಾ ಕಾಲೇಜುಗಳ ನೌಕರರ ಸಂಘದ ಗದಗ ಜಿಲ್ಲಾ ಘಟಕ ಏರ್ಪಡಿಸಿದ್ದ ಗದಗ ಜಿಲ್ಲಾ ಮಟ್ಟದ ಅನುದಾನಿತ ನೌಕರರ ಹಕ್ಕುಗಳ ಹೋರಾಟ ಜಾಗೃತಿ ಹಾಗೂ ಸಂಘ ಬಲವರ್ಧನೆ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.



ಈಗಾಗಲೇ ರಾಜ್ಯ ಸರ್ಕಾರ ಸರಕಾರಿ ನೌಕರರಿಗೆ ನೀಡುತ್ತಿರುವ ಎಲ್ಲ ರೀತಿಯ ಸೌಲಭ್ಯಗಳನ್ನೂ ಅನುದಾನಿತ ಶಾಲಾ-ಕಾಲೇಜುಗಳ ನೌಕರರಿಗೂ ನೀಡಬೇಕು. ಇಲ್ಲವಾದಲ್ಲಿ ರಾಜ್ಯದಾದ್ಯಂತ ಶಾಲಾ-ಕಾಲೇಜುಗಳನ್ನು ಬಂದ್ ಮಾಡಿ ಸರ್ಕಾರದ ವಿರುದ್ಧ ಹೋರಾಟ ಕೈಗೊಳ್ಳಲಾಗುವದು. ನಮ್ಮ ನೌಕರರ ಬಾಂಧವರಿಗೆ ಸರ್ಕಾರ ಅನ್ಯಾಯ ಮಾಡುತ್ತಲೇ ಬಂದಿದೆ. ಈ ಅನ್ಯಾಯವನ್ನು ಪ್ರಶ್ನಿಸಿ ನ್ಯಾಯ ಕೇಳಲು ರಾಜ್ಯದಲ್ಲಿ ನಮ್ಮ ಸಂಘಟನೆಯನ್ನು ಪ್ರಬಲಗೊಳಿಸಬೇಕಿದೆ. ರಾಜ್ಯದ ಎಲ್ಲ ಜಿಲ್ಲೆ, ತಾಲೂಕು ಕೇಂದ್ರಗಳಲ್ಲಿ ಸಂಘಟನೆಯನ್ನು ಬಲವರ್ಧನೆಗೊಳಿಸಿ ಆ ಮೂಲಕ ಸರ್ಕಾರದ ಮೇಲೆ ಒತ್ತಡ ತರಲು ಸಂಘಟನೆ ಅವಶ್ಯ ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಕನಕದಾಸ ಶಿಕ್ಷಣ ಸಮಿತಿಯ ಅಧ್ಯಕ್ಷ ರವಿ ದಂಡಿನ, ಉಮೇಶ ಹಿರೇಮಠ, ವ್ಹಿ.ಎಚ್. ಕೊಳ್ಳಿ ಅವರು ಸಂಘಟನೆಯ ಬಲವರ್ಧನೆ, ಸರಕಾರದ ಮಲತಾಯಿ ಧೋರಣೆ ಕುರಿತು ಮಾತನಾಡಿದರು.

ಸಂಘಟನೆಯ ಗದಗ ಜಿಲ್ಲಾ ಅಧ್ಯಕ್ಷ ಬಸವರಾಜ ಎಚ್. ಕೊರ್ಲಹಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿ, ಕಳೆದ 25-30 ವರ್ಷ ಸೇವೆ ಮಾಡಿದ ನೌಕರರಿಗೆ ನಿವೃತ್ತಿ ನಂತರ ಬಿಡಿಗಾಸು ಕೊಡದೆ ಬರಿಗೈಯಲ್ಲಿ ಕಳುಹಿಸಿದರೆ ಅವರ ಬದುಕು ಸಂಸಾರದ ಗತಿ ಏನು? ವಯೋಸಹಜ ಕಾಯಿಲೆಗಳ ಚಿಕಿತ್ಸೆಗೂ ಇನ್ನೊಬ್ಬರನ್ನು ಅವಲಂಬಿಸುವಂತಾಗಿದೆ. ಈ ಕುರಿತು ಸರ್ಕಾರ ಮರುಪರಿಶೀಲನೆ ಮಾಡಿ ತುರ್ತು ಅಗತ್ಯ ಕ್ರಮ ಜರುಗಿಸಿ ಅನ್ಯಾಯವನ್ನು ಸರಿಪಡಿಸಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಘಟನೆಯ ರಾಜ್ಯ ಉಪಾಧ್ಯಕ್ಷ ಈರಣ್ಣ ಹಾದಿಮನಿ ಮಾತನಾಡಿ, ಸರಕಾರ ಎಲ್ಲ ರೀತಿಯ ಸೌಲಭ್ಯಗಳನ್ನೂ ಅನುದಾನಿತ ಶಾಲಾ-ಕಾಲೇಜುಗಳ ನೌಕರರಿಗೂ ನೀಡುವವರೆಗೂ ಹೋರಾಟ ಮುಂದುವರೆಯಲಿದೆ ಎಂದರು.

ಪ್ರಾಚಾರ್ಯ ಉಮೇಶ ಹಿರೇಮಠ, ಶಶಿಧರ ಕುರಿ, ಮೇಗಲಮನಿ, ಸಿ.ಬಿ. ಕಮ್ಮಾರ, ಪ್ರದೀಪ ನಾಯಕ, ಎಸ್.ಸಿ. ಗಿಂಡಿಮಠ, ಆರ್.ಡಿ. ಪವಾರ, ಬಿ.ಎಸ್. ಬಸನಗೌಡರ, ಐ.ಕೆ. ಕಮ್ಮಾರ, ಮಂಜುನಾಥ ತೆಗ್ಗಿಮನಿ, ಎಂ.ಕೆ. ವಾಲಿಕಾರ, ಸಂಗಮೇಶ ಅಬ್ಬಿಗೇರಿ, ಎಸ್.ಎಸ್. ಪಾಟೀಲ, ಧನೇಶ ನಾಯಕ್, ಎಂ.ಡಿ. ಕೊಟಗಿ, ಎಂ.ಎಚ್. ಜೋಗಿನ, ಬಸಯ್ಯ ಸಾಲಿಮಠ, ಎ.ಬಿ. ಬೊಮ್ಮನಗೌಡ್ರು, ಎಂ.ಎಂ. ಬಿಜೂರ್, ಕೆ.ಎಫ್. ರಾಥೋಡ್, ಎಫ್.ವೈ. ಪಲ್ಲೇದ ಸೇರಿದಂತೆ ಗದಗ ಜಿಲ್ಲೆಯ ಪಿಂಚಣಿ ವಂಚಿತ ನೌಕರರು ಭಾಗವಹಿಸಿದ್ದರು. ಪ್ರಧಾನ ಕಾರ್ಯದರ್ಶಿ ರವಿ ಕೋಟಿ ಸ್ವಾಗತಿಸಿದರು. ಎಸ್.ಕೆ. ಆಡಿನ ನಿರೂಪಿಸಿ ವಂದಿಸಿದರು.

# ದೇವಿ ಪುರಾಣ ಶಕ್ತಿಯ ಸಂಕೇತ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ದೇವಿ ಪುರಾಣವು ಶಕ್ತಿ, ಭಕ್ತಿಯ ಸಂಕೇತವಾಗಿದೆ ಎಂದು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗದೇವರು ಹೇಳಿದರು.

ಅವರು ಪಟ್ಟಣದ ರೇಣುಕಾ ಯಲ್ಲಮ್ಮ ದೇವಸ್ಥಾನದಲ್ಲಿ ದೇವಿ ಪುರಾಣ ಮಂಗಲೋತ್ಸವದಲ್ಲಿ ಸಾಧಕರನ್ನು ಸನ್ಮಾನಿಸಿ ಮಾತನಾಡಿ, ವಿಯಜದಶಮಿ ವಿಜಯದ ಪ್ರತಿರೂಪವಾಗಿದ್ದು, ಇಲ್ಲಿ ಅಗಾಧವಾದ ಒಂದು ಶಕ್ತಿ ಅಡಕವಾಗಿದೆ. ಆ ಶಕ್ತಿಯನ್ನು ನಿಜ ಭಕ್ತಿಯಿಂದ ಮಾತ್ರ ಒಲಿಸಿಕೊಳ್ಳಲು ಸಾಧ್ಯವಾಗುತ್ತದೆ.



ಸಮಾಜ ನಮಗೇನು ಕೊಟ್ಟಿದೆ ಎನ್ನುವುದಕ್ಕಿಂತ ಸಮಾಜಕ್ಕೆ ನಾವೇನು ಕೊಟ್ಟೆವು ಅನ್ನುವುದು ಮುಖ್ಯವಾಗಿದ್ದು, ಮಕ್ಕಳ ಭವಿಷ್ಯಕ್ಕೆ, ಉತ್ತಮ ಸಮಾಜ ನಿರ್ಮಾಣಕ್ಕೆ ಪ್ರಕಾಶ ಮದ್ದಿನ ಸತತ 14 ವರ್ಷದಿಂದ ಉಚಿತ ಯೋಗ ಶಿಕ್ಷಣ ನೀಡುತ್ತಿರುವುದು ಶ್ಲಾಘನೀಯ ಎಂದರು.

ಗದಗ ಅಡವೀಂದ್ರಸ್ವಾಮಿಮಠದ ಮಹೇಶ್ವರ ಸ್ವಾಮೀಜಿ ಮಾತನಾಡಿ, ಸಮಾಜ ಸೇವೆ ಮಾಡುವುದು ಒಂದು ತಪಸ್ಸು. ಪ್ರಕಾಶ ಮದ್ದಿನ ಕುಟುಂಬ ಪ್ರತಿ ವರ್ಷವೂ ದೇವಿ ಪುರಾಣ ಉಣಬಡಿಸುವ ಮೂಲಕ ಜನರಲ್ಲಿ ಧರ್ಮ, ಸಂಸ್ಕೃತಿ, ಸಂಸ್ಕಾರ ಬಿತ್ತುತ್ತಿರುವುದು ಶ್ಲಾಘನೀಯವಾಗಿದೆ. ಮಕ್ಕಳಿಗೆ ಉತ್ತಮ ಶಿಕ್ಷಣದ ಜೊತೆಯಲ್ಲಿ ಉತ್ತಮ ಸಂಸ್ಕಾರ ನೀಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

ಅಧ್ಯಕ್ಷತೆಯನ್ನು ಎಂ.ಡಿ. ಬಟ್ಟೂರ ವಹಿಸಿದ್ದರು. ಅಶೋಕ ಸೋನಗೋಜಿ, ಪುನಿತ ಓಲೇಕಾರ, ಸಿಪಿಐ ಸಂಗಮೇಶ ಶಿವಯೋಗಿ, ಡಾ. ಎಸ್.ಸಿ. ಚವಡಿ, ಪಿ.ಎ. ವಂಟಕರ, ಮಂಜುನಾಥ ಮಟ್ಟಿ, ಚನ್ನಪ್ಪ ಅಂಗಡಿ, ಗೀತಾ ಜಾಧಾವ, ಪ್ರಕಾಶ ಮದ್ದಿನ, ಮೋಹನ ಮದ್ದಿನ, ಶಿದ್ದಣ್ಣಾ ಜವಳಿ ಇದ್ದರು.

### ಮಂತ್ರಾಲಯ ಪಾದಯಾತ್ರಾ ಸಂಘದಿಂದ 67ನೇ ವರ್ಷದ ಪಾದಯಾತ್ರೆ

# ಪಾದಯಾತ್ರೆಯಿಂದ ಮನದ ದುರ್ಗುಣಗಳ ನಾಶ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಂತ್ರಾಲಯ ಪಾದಯಾತ್ರಾ ಸಂಘದ ವತಿಯಿಂದ ಶ್ರೀ ಕ್ಷೇತ್ರ ಮಂತ್ರಾಲಯಕ್ಕೆ 67ನೇ ವರ್ಷದ ಪಾದಯಾತ್ರೆಯು ಯಾತ್ರೆಯ ರೂವಾರಿ ದಿ. ವೈದ್ಯ ಬಾಬುರಾವ್ ಕುಲಕರ್ಣಿ ಅವರ ನಿವಾಸದಿಂದ ರವಿವಾರ ಸಂಜೆ ಪ್ರಾರಂಭವಾಯಿತು.

ಪಾದಯಾತ್ರೆಯು ಅ. 16ರಂದು ಶ್ರೀಕ್ಷೇತ್ರ ಮಂತ್ರಾಲಯವನ್ನು ತಲುಪಲಿದೆ. ಪಾದಯಾತ್ರೆ ಆರಂಭಕ್ಕೂ ಮುನ್ನ ದಿ. ವೈದ್ಯ ಬಾಬುರಾವ್ ಕುಲಕರ್ಣಿ ಅವರ ನಿವಾಸದಲ್ಲಿ ಲೋಕ ಕಲ್ಯಾಣಾರ್ಥವಾಗಿ ಹಾಗೂ ಪಾದಯಾತ್ರೆಯ ಯಶಸ್ವಿಗಾಗಿ ಪ್ರಾಣೇಶಾಚಾರ್ಯ ಅವಧಾನಿ ಅವರ ನೇತೃತ್ವದಲ್ಲಿ ವಿಶೇಷ ಹೋಮವನ್ನು ನೆರವೇರಿಸಲಾಯಿತು. ಪಾದಯಾತ್ರೆಯಲ್ಲಿ ನಿತ್ಯ ಈ ಹೋಮ-ಹವನ, ಹರಿನಾಮಸ್ಮರಣೆ ನಡೆಸಲಾಗುವದರಿಂದ ಸಮಸ್ತ ಮಾನವ ಕುಲಕ್ಕೆ ಒಳ್ಳೆಯದಾಗಬೇಕೆಂಬ ಸಂಕಲ್ಪವನ್ನು ಹೊಂದಿದ್ದೇವೆ ಎಂದು ಅವಧಾನಿಗಳು ನುಡಿದರು.



ಪಾದಯಾತ್ರೆಯು ಸೋಮೇಶ್ವರನ ದರ್ಶನ ಪಡೆದು ಪಾಟೀಲ ಕುಲಕರ್ಣಿ ಅವರ ನಿವಾಸದಲ್ಲಿ ಸಭೆಯಾಗಿ ಮಾರ್ಪಟ್ಟಿತು. ಈ ಸಂದರ್ಭದಲ್ಲಿ ಸಂಘದ ಹಿರಿಯ ಸದಸ್ಯ ಕೃಷ್ಣ ಕುಲಕರ್ಣಿ ಮಾತನಾಡಿ, ಧಾರ್ಮಿಕ ಕ್ಷೇತ್ರದ ಪಾದಯಾತ್ರೆ ಮನಸ್ಸಿನಲ್ಲಿರುವ ದುರ್ಗುಣಗಳನ್ನು ನಾಶ ಮಾಡಿ ಸದ್ಗುಣಗಳ ಪ್ರಾಪ್ತಿಗೆ ಮುಕ್ತಿ ಮಾರ್ಗ ತೋರುವುದಾಗಿದೆ. ದಿ. ವೈದ್ಯ ಬಾಬುರಾವ್ ಕುಲಕರ್ಣಿಯವರ ಸಾತ್ವಿಕ ಶಕ್ತಿ ಈ ಪಾದಯಾತ್ರೆಯ ಯಶಸ್ವಿಗೆ ಕಾರಣವಾಗಿದೆ. ಪಾದಯಾತ್ರಾ ಸಂಘದ ಕಾರ್ಯಾಧ್ಯಕ್ಷರಾಗಿ ಎಲ್ಲರಿಗೂ ಮಾರ್ಗದರ್ಶಕರಾಗಿದ್ದ ದಿ. ಶ್ರೀನಿವಾಸ ಕುಲಕರ್ಣಿ (ತಂಗೋಡ) ಅವರ ಅಗಲಿಕೆಯು ಸಹ ಪಾದಯಾತ್ರೆಗೆ ತುಂಬಲಾರದ ನಷ್ಟವಾಗಿದ್ದು, ಇವರಿಬ್ಬರ ದಿವ್ಯಾತ್ಮ ನಮ್ಮ ಪಾದಯಾತ್ರೆಗೆ ದಾರಿದೀಪವಾಗಿರಲಿದೆ ಎಂದರು.

ಪಾದಯಾತ್ರೆಯು ಅ. 16ರಂದು ಸಂಜೆ ಮಂತ್ರಾಲಯ ತಲುಪಲಿದ್ದು, ಪಾದಯಾತ್ರೆಯಲ್ಲಿ ಧಾರ್ಮಿಕ ಚಿಂತನೆಗಳು, ನಿತ್ಯ ಪೂಜೆ, ಪಾರಾಯಣ, ಉಪನ್ಯಾಸಗಳು ನೆರವೇರಲಿವೆ. ಇಂತಹ ದೀರ್ಘಾವಧಿಯ ಈ ಭಾಗದಲ್ಲಿಯೇ ಮೊದಲನೆಯದು ಎನ್ನಬಹುದಾದ ಪಾದಾಯಾತ್ರಾ ಸಂಘದ 67ನೇ ವರ್ಷದ ಪಾದಯಾತ್ರೆಯಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಹೇಳಿದರು.

ಪಲ್ಲಣ್ಣ ಕುಲಕರ್ಣಿ, ಡಾ. ಶ್ರೀಹರಿ ಕುಲಕರ್ಣಿ, ಡಾ. ಬಿ.ಬಿ. ಜೋಶಿ, ಆರ್.ಎ. ಕುಲಕರ್ಣಿ, ಗೋಪಾಲ ಪಡ್ನೀಸ್, ಅನಿಲ ಕುಲಕರ್ಣಿ, ಗುರುರಾಜ ಪಾಟೀಲ ಕುಲಕರ್ಣಿ, ಲಕ್ಷ್ಮೀಕಾಂತ ಗಣಾಚಾರ, ವೆಂಕಟೇಶ ಗುಡಿ, ರಾಜಾಚಾರ್ಯ ರಾಯಚೂರ, ಅಶೋಕ ಪೂಜಾರ, ಗುರುರಾಜ ಕುಲಕರ್ಣಿ, ಕೆ.ಎಸ್. ಕುಲಕರ್ಣಿ, ನಾರಾಯಣ ಪಾಟೀಲಕುಲಕರ್ಣಿ, ದಿಗಂಬರ ಪೂಜಾರ, ಗುರಪ್ಪ ಶಿರೋಳ, ಮುಂತಾದವರಿದ್ದರು.

# ಆರ್.ಎಸ್. ಕುಂದಗೋಳರಿಗೆ ಗುರುವಂದನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಅರುಣೋದಯ ವಾಯುವಿಹಾರಿಗಳ ವಿವಿಧೋದ್ದೇಶಗಳ ಸಂಘದ ಗೌರವಾಧ್ಯಕ್ಷ ಪ್ರೊ. ಆರ್.ಎಸ್. ಕುಂದಗೋಳರಿಗೆ ಅವರ ಶಿಷ್ಯಬಳಗದಿಂದ ಗುರುವಂದನೆ ಕಾರ್ಯಕ್ರಮ ಜರುಗಿತು.

ನಗರದ ಮುನ್ಸಿಪಲ್ ಪದವಿಪೂರ್ವ ಮಹಾ ವಿದ್ಯಾಲಯದಲ್ಲಿ ಓದಿದ ಹಳೆಯ ವಿದ್ಯಾರ್ಥಿಗಳು ತಮ್ಮ ನೆಚ್ಚಿನ ಗುರುವೃಂದಕ್ಕೆ ಗೌರವ ಸಲ್ಲಿಸಲು ಮಹಾವಿದ್ಯಾಲಯದಲ್ಲಿ ಕಾರ್ಯಕ್ರಮ ಆಯೋಜಿಸಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅರುಣೋದಯ ವಾಯುವಿಹಾರ ಬಳಗದ ಅಧ್ಯಕ್ಷ ಪ್ರೊ. ಬಿ.ಆರ್. ಜಾಲಿಹಾಳ ವಹಿಸಿ ಮಾತನಾಡಿ, ಕುಂದಗೋಳ ಗುರುಗಳು ನಿವೃತ್ತಿ ಹೊಂದಿ ಹತ್ತು ವರ್ಷಗಳಾದರೂ ಅವರ ಶಿಷ್ಯರು ಅವರನ್ನು ನೆನೆದು ಅವರ ಮನೆಯವರೆಗೆ ಬಂದು ಗೌರವಾರ್ಪಣೆ ಮಾಡಿರುವುದು ಶ್ಲಾಘನೀಯ ಎಂದರು.

ಸನ್ಮಾನ ಸ್ವೀಕರಿಸಿ ಪ್ರೊ. ಆರ್.ಎಸ್. ಕುಂದಗೋಳ ಮಾತನಾಡಿ, ಶಿಷ್ಯರು ಪ್ರೀತಿಯಿಂದ ನಮ್ಮ ಮನೆಗೆ ಬಂದು ಗೌರವ ಸಲ್ಲಿಸಿರುವುದು ಅವಿಸ್ಮರಣೀಯ. ನಾನು ಒಬ್ಬ ಶಿಕ್ಷಕನಾಗಿ ಸೇವೆ ಸಲ್ಲಿಸಿದ್ದು ಸಾರ್ಥಕವಾಯಿತು ಎಂದರು.

ಕಾರ್ಯಕ್ರಮದಲ್ಲಿ ವೆಂಕಟೇಶ ಕಾರಬಾರಿ, ಅನಂತ ಗೌಡಪ್ಪನವರ, ಜಿ.ವ್ಹಿ. ಕಿಲಬನವರ, ಶಂಕರ ಬಳ್ಳಾರಿ, ಸೋಮಶೇಖರ ಬಿರಾದಾರ, ನಾಗರಾಜ ತಟ್ಟಿ, ಮಲ್ಲು ತಟ್ಟಿ, ಅಲ್ತಾಫ್ ಹುಬ್ಬಳ್ಳಿ, ಅರುಣೋದಯ ವಾಯುವಿಹಾರ ಸಂಘದ ಬಿ.ಬಿ. ಮಾಲಗಿತ್ತಿ, ಎಂ.ಸಿ. ವಗ್ಗಿ, ಎಸ್.ಬಿ. ಸಜ್ಜನರ, ಜಿ.ಬಿ. ಚನ್ನಪ್ಪಗೌಡರ, ಅನಂತಮೋಹನ ಭಟ್ಟ, ಟಿ.ಎನ್. ಗೋಡಿ, ಜಿ.ಬಿ. ಡೊಣ್ಣಿ, ಅಶೋಕ ವಡವಡಗಿ, ಅಶೋಕ ಕೊಡಗಲಿ, ಎಂ.ಬಿ. ಕರಿಬಿಷ್ಠಿ, ಎಮ್.ಎಫ್. ಕಲಕಂಬಿ, ಆರ್.ಟಿ. ನಾರಾಯಣಪೂರ, ಜಗದೀಶ ಜಾಲಿ, ಜಯಣ್ಣ ಪಾಟೀಲ, ಮಂಜು ಶಿವನಗುತ್ತಿ, ಸಿದ್ದಲಿಂಗಪ್ಪ ಪಟ್ಟಣಶೆಟ್ಟಿ, ವಾಸು ಲಮಾಣಿ ಮುಂತಾದವರು ಉಪಸ್ಥಿತರಿದ್ದರು. ಕಾರ್ಯದರ್ಶಿ ಹೆಚ್.ಎನ್. ಚಿಗರಿ, ಸ್ವಾಗತಿಸಿದರು, ಅರ್.ಎಂ. ಜಾಗನೂರ ವಂದಿಸಿದರು.




ಗದಗ ನಗರದ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವದ ಧಾರ್ಮಿಕ ಕಾರ್ಯಕ್ರಮದಲ್ಲಿ ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಸದಾಶಿವಯ್ಯ ಮದರಿಮಠ ಮಾತನಾಡಿದರು. ಕನಕಗಿರಿ ಸುವರ್ಣಗಿರಿ ಸಂಸ್ಥಾನ ವಿರಕ್ತಮಠದ ಶ್ರೀನಿರಂಜನಪ್ರಭು ಡಾ. ಚನ್ನಮಲ್ಲ ಮಹಾಸ್ವಾಮಿಗಳು, ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಹೊಸಳ್ಳಿಮಠ, ಜಾನಪದ ವಿದ್ವಾಂಸರಾದ ಡಾ. ಶಂಭು ಬಳಿಗಾರ ಹಾಗೂ ಗಣ್ಯರಿದ್ದರು.

# ಬಿತ್ತನೆ ಬೀಜಗಳ ಸದುಪಯೋಗವಾಗಲಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

2025-26ನೇ ಸಾಲಿನ ಹಿಂಗಾರು ಹಂಗಾಮಿನ ರಿಯಾಯಿತಿ ದರದ ಕಡಲೆ ಹಾಗೂ ಜೋಳದ ಬಿತ್ತನೆ ಬೀಜಗಳನ್ನು ಹುಲಕೋಟಿ ಗ್ರಾ.ಪಂ ಅಧ್ಯಕ್ಷೆ ನಾಗರತ್ನಾ ವಿತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ರೈತರಿಗಾಗಿ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜಗಳು ಲಭ್ಯವಿದ್ದು, ರೈತರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದರು.

ಹುಲಕೋಟಿ ಕೃಷಿ ಕೇಂದ್ರದ ಕೃಷಿ ಸಹಾಯಕ ನಿರ್ದೇಶಕಿ ರಾಜೇಶ್ವರಿ ಚಿನಿವಾಲರ, ಪರಮೇಶ್ವರಪ್ಪ ಜಂಟ್ಲಿ, ಕೃಷಿ ಕೇಂದ್ರದ ಸಿಬ್ಬಂದಿ ಹಾಗೂ ರೈತ ಬಾಂಧವರು ಇದ್ದರು.

# ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣ ಕೈಬಿಡಿ

▶▶ ಮೊದಲನೇ ಪುಟದಿಂದ

ಹೀಗಿದ್ದರೂ, 'ಡಿ' ಗುಂಪಿಗೆ 'ಸಿ' ಗುಂಪಿಗಿಂತ ಕಡಿಮೆ ಶೇಕಡಾವಾರು ಮೀಸಲಾತಿ ನೀಡಿರುವುದು ಸಾಮಾಜಿಕ ನ್ಯಾಯಕ್ಕೆ ವಿರುದ್ಧವಾಗಿದೆ ಎಂದರು.

ಪಾದಯಾತ್ರೆಯಲ್ಲಿ ಗದಗ ಜಿಲ್ಲಾ ತಾಂಡಾದ ನಾಯಕ, ಡಾವ್, ಕಾರಭಾರಿ ಮತ್ತು ಪಂಚರು, ಮುಖಂಡರಾದ ಚಂದ್ರಕಾಂತ ಚವ್ಹಾಣ, ಭೀಮಸಿಂಗ್ ರಾಠೋಡಿ, ಐ.ಎಸ್. ಪೂಜಾರ, ಟಿ.ಎಲ್. ನಾಯಕ, ಚಂದು ನಾಯಕ, ಶಿವಪ್ಪ ನಾಯಕ, ಕೇಶಪ್ಪ ಕಾರಭಾರಿ, ಕುಬೇರಪ್ಪ ನಾಯಕ, ಖೀಮಪ್ಪ ನಾಯಕ, ತೇಜು ನಾಯಕ, ಶಿವಪತ್ರ ನಾಯಕ, ಕುಬೇರಪ್ಪ ರಾಠೋಡ, ಶಿವಣ್ಣ ಲಮಾಣಿ, ಮಹೇಶ ಲಮಾಣಿ, ಪರಮೇಶ ಲಮಾಣಿ, ದೀಪಕ ಲಮಾಣಿ, ಹನಮಂತ ನಾಯ್ಕ, ಶಿವು ನಾಯ್ಕ, ಭೋವಿ ವಡ್ಡರ ಸಂದಕದ, ಪರಮೇಶ ನಾಯಕ, ಸುರೇಶ ಪೂಜಾರ, ಧನಸಿಂಗ, ಧನ್ನುರಾಮ ತಂಬೂರಿ, ಸಿ.ಪಿ. ಬೊಮ್ಮನಪಾಡ, ಕುಬೇರ ಲಮಾಣಿ, ಗೀತಾಬಾಯಿ, ಸೇರಿದಂತೆ ಸಮಾಜದ ಮುಖಂಡರು ಭಾಗವಹಿಸಿದ್ದರು.

# ಸಮಸಮಾಜವನ್ನು ಬಯಸದವರು ಸಮೀಕ್ಷೆಯನ್ನು ವಿರೋಧಿಸುತ್ತಿದ್ದಾರೆ: ಸಿಎಂ ಸಿದ್ದರಾಮಯ್ಯ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯಲ್ಲಿ ಯಾವ ಜಾತಿಯವರನ್ನೂ ತುಳಿಯುವ ಪ್ರಶ್ನೆಯಿಲ್ಲ. ಸಮಸಮಾಜವನ್ನು ಬಯಸದವರು ಸಮೀಕ್ಷೆಯನ್ನು ವಿರೋಧಿಸುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಅವರು ಸೋಮವಾರ (ಅ.6) ಕೊಪ್ಪಳದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.



ಮೇಲ್ಜಾತಿಗಳನ್ನು ತುಳಿಯಲು ಸಮೀಕ್ಷೆ ನಡೆಸಲಾಗುತ್ತಿದೆ ಎಂಬ ಕೇಂದ್ರ ಸಚಿವ ಸೋಮಣ್ಣ ಹೇಳಿಕೆಗೆ ಪ್ರತಿಕ್ರಿಯಿಸಿದ ಸಿಎಂ, ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ನಡೆಸದಿದ್ದರೆ ಸಮಾಜದಲ್ಲಿ ಜನರ ಸ್ಥಿತಿಗತಿ ಬಗ್ಗೆ ಅರಿಯಲು ಸಾಧ್ಯವಿಲ್ಲ. ಈ ಸಮೀಕ್ಷೆಯಲ್ಲಿ ಯಾವ ಜಾತಿಯವರನ್ನೂ ತುಳಿಯುವ ಪ್ರಶ್ನೆಯಿಲ್ಲ. ಸಮಸಮಾಜ ನಿರ್ಮಾಣವನ್ನು ವಿರೋಧಿಸುವವರು ಇಂತಹ ಹೇಳಿಕೆಗಳನ್ನು ನೀಡುವ ಮೂಲಕ ಜನರ ದಾರಿ ತಪ್ಪಿಸುತ್ತಿದ್ದಾರೆ ಎಂದರು. ಈಗಾಗಲೇ 1.10 ಕೋಟಿ ಕುಟುಂಬಗಳ ಸಮೀಕ್ಷಾ ಕಾರ್ಯ ಮುಗಿದಿದ್ದು, ನಿನ್ನೆಯವರೆಗೆ ಶೇ.63ರಷ್ಟು ಸಮೀಕ್ಷೆ ಕಾರ್ಯ ಪ್ರಗತಿಯಾಗಿದೆ. ನಾಳೆ ಸಂಜೆಯವರೆಗೆ ಸಮೀಕ್ಷೆಯ ಪ್ರಗತಿಯನ್ನು ಪರಿಶೀಲಿಸಿ, ಅವಧಿ ವಿಸ್ತರಣೆ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು ಎಂದು ಸಿಎಂ ತಿಳಿಸಿದರು.

ಕೊಪ್ಪಳದಲ್ಲಿ ಶೇ.97ರಷ್ಟು ಸಮೀಕ್ಷೆ ಪೂರ್ಣ ಕೊಪ್ಪಳ ಜಿಲ್ಲೆಯಿಂದ ಶೇ.97ರಷ್ಟು ಸಮೀಕ್ಷೆ ಪೂರ್ಣಗೊಂಡಿದೆ ಎಂದು ಸಿಎಂ ಮಾಹಿತಿ ನೀಡಿದರು. ಕೊಪ್ಪಳದಿಂದ ಲೋಕಸಭೆ ಚುನಾವಣೆಗೆ ಸ್ಪರ್ಧಿಸಿ ಕಡಿಮೆ ಅಂತರದಲ್ಲಿ ಸೋತಿದ್ದರೂ, ಕೊಪ್ಪಳದ ಜನರು ತನ್ನನ್ನು ಆಶೀರ್ವದಿಸಿದ್ದರು ಎಂದು ಸ್ಮರಿಸಿದ ಸಿಎಂ, ಜನತೆಗೆ ಧನ್ಯವಾದ ಹೇಳಿದರು.

ಬಲ್ಡೋಟಾ ಕಾರ್ಖಾನೆ ವಿರುದ್ಧ ಕೊಪ್ಪಳದಲ್ಲಿ ಹೋರಾಟಗಳು ನಡೆದಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಸಿಎಂ, ಈ ವಿಚಾರ ನ್ಯಾಯಾಲಯದಲ್ಲಿ ವಿಲೇ ಇದ್ದು, ತೀರ್ಪಿನ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

ಪರಿಸರ ಮಾಲಿನ್ಯ ತಡೆಯಲು ಕ್ರಮ ಎಂಎಸ್‌ಪಿಎಲ್ ಸೇರಿದಂತೆ ವಿವಿಧ ಕೈಗಾರಿಕೆಗಳಿಂದ ಬರುವ ಧೂಳಿನಿಂದ ಪರಿಸರ ಮಾಲಿನ್ಯವಾಗುತ್ತಿದ್ದು, ಇದನ್ನು ತಡೆಗಟ್ಟಲು ಸರ್ಕಾರದ ಕ್ರಮ ತೆಗೆದುಕೊಳ್ಳುತ್ತಿದೆಯೇ? ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಸಿಎಂ, ಕಾರ್ಖಾನೆಗಳಿಂದ ಬರುವ ಧೂಳನ್ನು ಪರೀಕ್ಷೆ ನಡೆಸಿ, ಧೂಳು ಬರದಂತೆ ಕ್ರಮ ತೆಗೆದುಕೊಳ್ಳುವ ಬಗ್ಗೆ ಪರಿಶೀಲನೆ ನಡೆಸಲಾಗುವುದು ಎಂದು ಹೇಳಿದರು.




ಗದಗ ನಗರದ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವದಲ್ಲಿ ಜಾನಪದ ವಿದ್ಯಾಂಸರಾದ ಡಾ. ಶಂಭು ಬಳಿಗಾರ ಅವರು ಜಾನಪದ ಜೀವನ ದರ್ಶನ ಕಾರ್ಯಕ್ರಮ ನಡೆಸಿಕೊಟ್ಟರು. ಕನಕಗಿರಿ ಸುವರ್ಣಗಿರಿ ಸಂಸ್ಥಾನ ವಿರಕ್ತಮಠದ ಶ್ರೀನಿರಂಜನಪ್ರಭು ಡಾ. ಚನ್ನಮಲ್ಲ ಮಹಾಸ್ವಾಮಿಗಳು, ಶ್ರೀಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಹೊಸಳ್ಳಿಮಠ ಹಾಗೂ ಗಣ್ಯರು ಇದ್ದರು.

# ನಿಧನ

## ಸೋಮಲಿಂಗಪ್ಪ ನವಲಗುಂದ



**ಮುಳಗುಂದ:** ಪಟ್ಟಣ ಸಮೀಪದ ಕುರ್ತಕೋಟಿ ಗ್ರಾಮದ ಸೋಮಲಿಂಗಪ್ಪ ನವಲಗುಂದ (63) ಸೋಮವಾರ ನಿಧನರಾಗಿದ್ದಾರೆ.

ಮೃತರು ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗ ಅಗಲಿದ್ದಾರೆ.

## ದೀಪಾವಳಿಗೆ ದಿನಗಣನೆ: ಪಟಾಕಿ ಮಾರುವವರಿಗೆ ಖಡಕ್ ಎಚ್ಚರಿಕೆ ಕೊಟ್ಟ ಅರಣ್ಯ ಸಚಿವರು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದೀಪಾವಳಿಗೆ ಇನ್ನೇನೂ ದಿನಗಣನೆ ಶುರುವಾಗಿದ್ದು, ಈ ಹೊತ್ತಲ್ಲೇ ಪಟಾಕಿ ಮಾರುವವರಿಗೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರು ಖಡಕ್ ಎಚ್ಚರಿಕೆ ಕೊಟ್ಟಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ದೀಪಾವಳಿಯಲ್ಲಿ ಹಸಿರು ಪಟಾಕಿ ಮಾತ್ರ ಹಚ್ಚಬೇಕು. ಈ ಸಂಬಂಧ ಸುಪ್ರೀಂ ಕೋರ್ಟ್ ಆದೇಶ ಇದೆ. ಸುಪ್ರೀಂ ಕೋರ್ಟ್ ಆದೇಶ ಇದ್ದರೂ, ಭಾರ ಇರುವ, ಲೋಹ ಭರಿತ ಪಟಾಕಿ ಬಳಕೆ ಆಗುತ್ತಿದೆ. ಅಧಿಕಾರಿಗಳಿಗೆ ಸೂಚನೆ ಕೊಡುತ್ತಿದ್ದೇನೆ.

ಯಾವುದೇ ಹಸಿರು ಪಟಾಕಿ ಬಿಟ್ಟು ಬೇರೆಯದಕ್ಕೆ ಅವಕಾಶ ಕೊಡಬಾರದು. ಮಳಿಗೆಗಳಿಗೆ ಹೋಗಿ ಪರಿಶೀಲನೆ ಮಾಡಬೇಕು. ಪರಿಸರ ಸ್ನೇಹಿ ಪಟಾಕಿ ಮಾಡುತ್ತೇವೆ ಅಂತ ಮುಚ್ಚಳಿಕೆ ಬರೆದು ಕೊಟ್ಟಿದ್ದಾರೆ.

ಯಾರಾದರೂ ನಿಯಮ ಉಲ್ಲಂಘನೆ ಮಾಡಿ ಪಟಾಕಿ ಮಾರಿದರೆ ಅವರ ಲೈಸೆನ್ಸ್ ರದ್ದು ಮಾಡಲು ಕ್ರಮ ತೆಗೆದುಕೊಳ್ಳಲು ಸೂಚನೆ ನೀಡಲಾಗಿದೆ ಎಂದರು.

ಮಾಲಿನ್ಯ ನಿಯಂತ್ರಣ ಮಂಡಳಿಯವರು ಒಟ್ಟಾಗಿ ಸರ್ಕಾರದ ಎಲ್ಲಾ ನಿಯಮಗಳನ್ನು ಪಾಲಿಸಲು ಮನವಿ ಮಾಡುತ್ತೇನೆ. ಅಧಿಕಾರಿಗಳು ಪರಿಸರ, ಪ್ರಕೃತಿಯನ್ನ ಕಟ್ಟುನಿಟ್ಟಾಗಿ ಸಂರಕ್ಷಣೆ ಮಾಡಬೇಕು. ಆಗ ಮಾತ್ರ ಮುಂದಿನ ಪೀಳಿಗೆಗೆ ಉತ್ತಮ ವಾತಾವರಣ, ಪರಿಸರ ಕೊಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

### ವಿವಿಧ ಕಾಮಗಾರಿಗಳ ಭೂಮಿಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಸರ್ಕಾರದಿಂದ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ

■ವಿಜಯಸಾಕ್ಷಿ ಸುದ್ದಿ, ಡಂಬಳ

ಪ್ರತಿ ಹಳ್ಳಿಗೂ ಅಭಿವೃದ್ಧಿಯ ಬೆಳಕು ತಲುಪಬೇಕು. ಸಾರ್ವಜನಿಕರ ಹಿತದೃಷ್ಟಿಯಿಂದ ಸರ್ಕಾರವು ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡಿದೆ. ಗ್ರಾಮೀಣ ಪ್ರದೇಶದ ಬಡಾವಣೆಗಳಲ್ಲಿ ಅಭಿವೃದ್ಧಿ, ಸುಧಾರಣೆಯ ಕಾರ್ಯಗಳನ್ನು ಮಾಡಲಾಗುತ್ತಿದೆ ಎಂದು ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ್ ಹೇಳಿದರು.

ಡಂಬಳ ಹೋಬಳಿಯ ಹಳ್ಳಿಗುಡಿ ಗ್ರಾಮದಲ್ಲಿ 45ಲಕ್ಷ ರೂ ವೆಚ್ಚದ ಸಿ.ಸಿ ರಸ್ತೆ, ಗ್ರಂಥಾಲಯ, ಹಳ್ಳಿಕೇರಿ ಗ್ರಾಮದ ಕವಲೂರ ರಸ್ತೆಯ ಹಳ್ಳ ದಾಟಲು 45 ಲಕ್ಷ ರೂ ವೆಚ್ಚದ ಸೇತುವೆ ನಿರ್ಮಾಣ, 18 ಲಕ್ಷ ರೂ ವೆಚ್ಚದ ಅಂಗನವಾಡಿ ಕಟ್ಟಡ ಭೂಮಿ ಪೂಜೆ ಹಾಗೂ 28 ಲಕ್ಷ ರೂ ವೆಚ್ಚದ ಅಗಸಿ



ಬಾಗಿಲ ಕಟ್ಟಡದ ಭೂಮಿ ಪೂಜೆ, ಡ.ಸ. ರಾಮೇನಹಳ್ಳಿ ಗ್ರಾಮದಲ್ಲಿ ಸಿ.ಸಿ. ರಸ್ತೆ ಕಾಮಗಾರಿಯ ಭೂಮಿ ಪೂಜೆ, ಕೃಷಿ ಇಲಾಖೆಯಿಂದ ಹಿಂಗಾರು ಹಂಗಾಮಿನ ಬೀಜ ವಿತರಣೆಗೆ ಚಾಲನೆ ನೀಡಿ ಅವರು ಮಾನಾಡಿದರು.

ವ ' ೧ ೧ ಖ್ಯ ವ ' ೧ ೦ ತ್ರಿ ಸಿದ್ದರಾಮಯ್ಯನವರು ಪ್ರತಿ ಹೆಕ್ಟೇರ್‌ಗೆ 8 ಸಾವಿರ ರೂ. ಗಿಂತ ಹೆಚ್ಚು ಪರಿಹಾರವನ್ನು ನೀಡುವುದಕ್ಕಾಗಿ ಯೋಜನೆಯನ್ನು ರೈತರಿಗಾಗಿ ಹಾಕಿಕೊಂಡಿದ್ದಾರೆ. ಪಂಚ ಗ್ಯಾರಂಟಿ ಮೂಲಕ 1 ಕೋಟಿಗೂ ಹೆಚ್ಚು ಕುಟುಂಬಗಳು ಆರ್ಥಿಕ ಪ್ರವಾಹಿನಿಗೆ ಬಂದಿವೆ. ಹಳ್ಳಿಕೇರಿ ಗ್ರಾಮದ ರೈತರು ಬೆಳೆಗಳನ್ನು ಕಟಾವು ಮಾಡಿ ತರಲು ಅಗತ್ಯವಿದ್ದ ಕವಲೂರ ಹಳ್ಳದ ಸೇತುವೆ ನಿರ್ಮಾಣಕ್ಕೆ 45 ಲಕ್ಷ ರೂ ವೆಚ್ಚದಲ್ಲಿ ಆದ್ಯತೆ ನೀಡಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮುಂಡರಗಿ ತಾಲೂಕಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಿ.ಡಿ. ಮೋರನಾಳ, ತಹಸೀಲ್ದಾರ ಯರಿಸ್ವಾಮಿ ಪಿ.ಎಸ್, ಇಓ ವಿಶ್ವನಾಥ ಹೊಸಮನಿ, ಗ್ರಾ.ಪಂ ಅಧ್ಯಕ್ಷೆ ಮರಿಯಮ್ಮ ಹಿರೇಮನಿ, ತಾ.ಪಂ ಮಾಜಿ ಅಧ್ಯಕ್ಷ ಕೃಷ್ಣಗೌಡ ಪಾಟೀಲ್, ಗೋಣಿಬಸಪ್ಪ ಕೊರ್ಲಹಳ್ಳಿ, ಶಾಂತವೀರ ಚೆನ್ನಳ್ಳಿ, ಬಸವರಡ್ಡಿ ಬಂಡಿಹಾಳ, ಬಸುರಾಜ ಶಿರೂಳ, ಬಾಬು ಸರಕಾವಾಸ, ದೊಡ್ಡಬಸಪ್ಪ ಚೆನ್ನಳ್ಳಿ, ಗುರಣ್ಣ ಕುರ್ತಿಕೋಟಿ, ಗುತ್ತಿಗೆದಾರ ನಾಗರಾಜ ಸಜ್ಜನ, ಬೀರಪ್ಪ ಬೀರಣ್ಣನವರ, ಮಲ್ಲನಾಯ್ಕರ, ಯಲ್ಲಪ್ಪ ಬಚನಳ್ಳಿ, ಹನುಮಂತ ಆನಿ, ದೇವೆಂದ್ರ ಪೂಜಾರ, ಬಸಪ್ಪ ಮಲ್ಲನಾಯ್ಕರ, ಕುಬೇರಪ್ಪ ಕೊಳ್ಳಾರ, ಗವಿಸಿದ್ಧಯ್ಯ ಹಿರೇಮಠ, ನಿಂಗಪ್ಪ ತೊಂಡಿಹಾಳ, ವೀರಭದ್ರಪ್ಪ ಚುರ್ಚಿಹಾಳ, ಯಲ್ಲಪ ವಣಕೇರಿ, ರಾಮಪ್ಪ ಬಿನ್ನಾಳ, ಮಾರುತಿ ಹೊಂಬಳ, ಪಿಆರ್‌ಡಿ ಅಭಿಯಂತರ ಚಂದ್ರಕಾಂತ ನಿರಲೇಕರ, ಪಿಡಬ್ಲುಡಿ ಅಭಿಯಂತರ ಬಸುರಾಜ, ಉಪತಹಸೀಲ್ದಾರ ಎಸ್.ಎಸ್. ಬಿಚ್ಚಾಲಿ, ಕೃಷಿ ನಿರ್ದೇಶಕ ಪ್ರಾಣೇಶ, ಕೃಷಿ ಅಧಿಕಾರಿ ಎಸ್.ಬಿ. ರಾಮನಳ್ಳಿ, ಬಿಇ ಗಂಗಾಧರ ಅಣ್ಣಿಗೇರಿ, ಸಿಡಿಪಿಒ ಮಹಾದೇವ, ಪಿಡಿಒ ಲತಾ ಮಾನೆ, ಗ್ರಾ.ಪಂ ಸದಸ್ಯರು, ರೈತರು, ಗ್ರಾಮದ ಹಿರಿಯರು ಇದ್ದರು.

ಹಳ್ಳಿಕೇರಿ ಮಹಿಳೆಯರು ಗ್ಯಾರಂಟಿ ಹಣವನ್ನು ಉಳಿಸಿ, ಗ್ರಾಮದ ಪ್ರತಿ ಮಹಿಳೆಯರು 500 ರೂ ಸೇರಿಸಿ ಆರಾಧ್ಯ ದೇವತೆ ಕಾಳಮ್ಮ ದೇವಿಗೆ ಬೆಳ್ಳಿ ಕಿರೀಟ ನೀಡಿ ಭಕ್ತಿ ಸಮರ್ಪಿಸಿರುವುದು ಸಂತೋಷಕ್ಕೆ ಕಾರಣವಾಗಿದೆ. ರೈತರು ಬಿತ್ತನೆಗೆ ಕೃಷಿ ಇಲಾಖೆಯಿಂದ ಕೊಡುವ ಬೀಜಗಳನ್ನು ಪಡೆದುಕೊಳ್ಳುವುದರ ಮೂಲಕ ಇದರ ಸದ್ಬಳಕೆಯನ್ನು ಮಾಡಿಕೊಳ್ಳಿ. ಮುಂಬರುವ ಗ್ರಾ.ಪಂ, ತಾ.ಪಂ, ಜಿ.ಪಂ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಇನ್ನಷ್ಟು ಶಕ್ತಿ ನೀಡಲು ಮುಂದಾಗಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

# ಶಿವಾನುಭವ ಸಮಿತಿ ಪದಾಧಿಕಾರಿಗಳ ನೇಮಕ









■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮುಳಗುಂದ ನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ ಪ್ರತಿ ತಿಂಗಳ ಮೊದಲ ಮಂಗಳವಾರ ಶಿವಾನುಭವ ನಡೆಯಲಿದ್ದು, ಶ್ರೀಮಠದಲ್ಲಿ ಜರುಗಿದ ಭಕ್ತರ ಸಭೆಯಲ್ಲಿ 2025-26ನೇ ಸಾಲಿನ ಶಿವಾನುಭವ ಸಮಿತಿಗೆ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು.

ಶ್ರೀಅಡವೀಂದ್ರಸ್ವಾಮಿ ಮಠದ ಧರ್ಮದರ್ಶಿಗಳಾದ ವೇದಮೂರ್ತಿ ಮಹೇಶ್ವರ ಸ್ವಾಮಿಗಳು ಸಭೆಯ ಸಾನ್ನಿಧ್ಯ ವಹಿಸಿದ್ದರು. ಶಿವಾನುಭವ ಸಮಿತಿ ಅಧ್ಯಕ್ಷರಾಗಿ ಡಾ. ರಾಜೇಂದ್ರ ಗಡಾದ, ಪ್ರಧಾನ ಕಾರ್ಯದರ್ಶಿಯಾಗಿ ಪ್ರಭುಗೌಡ ಪಾಟೀಲ, ಸಾಂಸ್ಕೃತಿಕ ಕಾರ್ಯದರ್ಶಿಯಾಗಿ ಗುರಪ್ಪ ನಿಡಗುಂದಿ, ಕೋಶಾಧ್ಯಕ್ಷರಾಗಿ ಸಿದ್ಧಣ್ಣ ಜವಳಿ ನೇಮಕಗೊಂಡಿದ್ದಾರೆ.


ಗೌರವಾನ್ವಿತ ಸದಸ್ಯರಾಗಿ ಬಿ.ಎಂ. ಬಿಳೆಯಲಿ, ಬಿ.ಬಿ. ಪಾಟೀಲ, ಪ್ರೊ. ಕೆ.ಎಚ್. ಬೇಲೂರ, ಬಿ.ಡಿ. ಕಿಲಬನವರ, ಎಲ್.ಎಸ್. ನೀಲಗುಂದ, ಸಿ.ಬಿ. ಹಿರೇಮಠ, ಜಿ.ಎಂ. ಯಾನಮಶೆಟ್ಟಿ, ಕೆ.ವಿ. ಹಿರೇಮಠ, ಎಸ್.ಎಸ್. ಪಾಟೀಲ(ಅರಹುಣಸಿ), ಪ್ರಕಾಶ ಬಂಡಿ, ಬಸವರಾಜ ಸಂಕನೂರ, ಎಸ್.ಪಿ. ಹಿರೇಮಠ, ಬಿ.ಎಚ್. ಗರಡಿಮನಿ, ಗೌರವಾನ್ವಿತ ಸದಸ್ಯೆಯರಾಗಿ ಸುಶೀಲಾ ಜಿ.ಕೋಟಿ, ಶಾಂತಾಬಾಯಿ ಬಾಕಳೆ, ಕಸ್ತೂರಿಬಾಯಿ ಭಾಂಡಗೆ, ಗೀತಾ ಹೂಗಾರ ಅವರನ್ನು ನೇಮಕ ಮಾಡಲಾಗಿದೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

# ಯೋಗಿರಾಜರ ಜಯಂತ್ಯುತ್ಸವ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ತಮ್ಮ ಆಧ್ಯಾತ್ಮಿಕ ಸಾಧನೆಯಲ್ಲಿ ಅದ್ವಿತೀಯ ಸಾಧನೆ ಮಾಡಿ ಯೋಗಿರಾಜರೆಂದು ಪ್ರಸಿದ್ಧಿ ಪಡೆದಿರುವ ಯೋಗಿರಾಜ ಮಹಾರಾಜರ 161ನೇ ಜಯಂತ್ಯುತ್ಸವವನ್ನು ಇಲ್ಲಿಯ ವಿದ್ಯಾಶಂಕರ ದೇವಸ್ಥಾನದಲ್ಲಿ ಶೃದ್ಧಾ-ಭಕ್ತಿಯಿಂದ ಆಚರಿಸಲಾಯಿತು.

ಯೋಗಿರಾಜರ ಭಕ್ತ ಮಂಡಳಿಯ ಆಶ್ರಯದಲ್ಲಿ ಹಮ್ಮಿಕೊಂಡ ಜಯಂತಿ ಕಾರ್ಯಕ್ರಮದಲ್ಲಿ ಬೆಳಿಗ್ಗೆ ವಿದ್ಯಾಶಂಕರ ದೇವರಿಗೆ ವಿಶೇಷ ಪೂಜೆ ಸಲ್ಲಿಸಿದ ನಂತರ ಯೋಗಿರಾಜರ ಪಾದುಕೆಗಳಿಗೆ ಪಂಚಾಮೃತ ಅಭಿಷೇಕ ನೆರವೇರಿಸಲಾಯಿತು. ಯೋಗಿರಾಜರ ಮಹಿಳಾ ಮಂಡಳಿಯ ಸದಸ್ಯರಿಂದ ಶಂಕರಾಚಾರ್ಯ ವಿರಚಿತ ಸ್ತೋತ್ರಗಳ ಪಠಣ ಹಾಗೂ ಭಜನೆ ನಡೆಯಿತು. ವಿಧಿ-ವಿಧಾನಗಳೊಂದಿಗೆ ಸದ್ಗುರುಗಳ ಪಾಲಕಾರೋಹಣ ಪೂಜೆ, ನೈವೇದ್ಯ, ಮಹಾಮಂಗಳಾರತಿ ಪ್ರಸಾದ ವಿನಿಯೋಗ ನಡೆಯಿತು.




# ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿಯಿಂದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ದಿ ಕಾನ್ ಸೇಲ್ ಸೊಸೈಟಿ ಆವರಣದಲ್ಲಿರುವ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ವತಿಯಿಂದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮ ಅ.7ರಂದು ಬೆಳಿಗ್ಗೆ 11ಕ್ಕೆ ಜರುಗಲಿದೆ ಎಂದು ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು, ಖನಿಜ ಅಬಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಭಾಗವಹಿಸುವರು. ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ,



ಸುಜಾತಾ ದೊಡ್ಡಮನಿ, ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಪಾಲ್ಗೊಳ್ಳುವರು.

ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ತಾಲೂಕ ಪಂಚಾಯಿತಿ, ಗ್ರಾಮ ಪಂಚಾಯಿತಿ, ಎಪಿಎಂಸಿ, ಪಿ.ಎಲ್.ಡಿ ಬ್ಯಾಂಕ್, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು, ಕಾಂಗ್ರೆಸ್ ಪ್ರಚಾರ ಸಮಿತಿ, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರೀಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಪಾಲ್ಗೊಳ್ಳಬೇಕೆಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ವಿನಂತಿಸಿದ್ದಾರೆ.

# ಮೂಲಭೂತ ಸೌಕರ್ಯ ಕಲ್ಪಿಸಿ





■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ನೈಋತ್ಯ ರೈಲ್ವೆ ವಲಯದ ಅಡಿಯಲ್ಲಿ ಅಮೃತ ಭಾರತ ನಿಲ್ದಾಣ ಯೋಜನೆಯಡಿ ಒಟ್ಟು 91.33 ಕೋಟಿ ರೂ ವೆಚ್ಚದಲ್ಲಿ ಮೇಲ್ದರ್ಜೆಗೇರಿಸಿದ ಗದಗ ರೈಲು ನಿಲ್ದಾಣದ ಹೊರ ಭಾಗದಲ್ಲಿ ಅತ್ಯವಶ್ಯಕ ಮೂಲಭೂತ ಸೌಕರ್ಯಗಳಾದ ಮೂತ್ರಾಲಯ, ಶೌಚಾಲಯ, ಸ್ನಾನಗೃಹ ಮತ್ತು ಎ.ಟಿ.ಎಮ್ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ಅರಿವು ಫೌಂಡೇಶನ್ ಅಧ್ಯಕ್ಷ ವಿಶ್ವನಾಥ ಶೀರಿ ಕೋರಿದ್ದಾರೆ.

ಗದಗ ರೈಲು ನಿಲ್ದಾಣಕ್ಕೆ ದಿನನಿತ್ಯ 25ಕ್ಕೂ ಹೆಚ್ಚು ರೈಲುಗಳು ಓಡಾಡುತ್ತಿದ್ದು, ಸಾವಿರಾರು ಪ್ರಯಾಣಿಕರು ಸಂಚರಿಸುತ್ತಿದ್ದಾರೆ. ಆದರೆ ಇಲ್ಲಿ ಪ್ರಯಾಣಿಕರ ಹೊರತಾಗಿ ಇತರರು ಶೌಚ ಕ್ರಿಯೆಗೆ ಬಯಲು ಜಾಗವನ್ನು ಆಶ್ರಯಿಸಬೇಕಾಗಿದೆ. ರೈಲು ನಿಲ್ದಾಣದ ಒಳಭಾಗದಲ್ಲಿ ಇರುವ ಸೌಲಭ್ಯಗಳನ್ನು ಪಡೆಯಲು ಒಳಗಡೆ ಪ್ರವೇಶಿಸಲು ಪ್ಲಾಟ್‌ಫಾರಂ ಟಿಕೆಟ ಕಡ್ಡಾಯವಾಗಿ ಇರುವುದರಿಂದ ಟಿಕೆಟ್ ಹಾಗೂ ಶೌಚಾಲಯದ ಪಾವತಿ ಮೊತ್ತ ಆರ್ಥಿಕ ಹೊರೆ ಆಗುತ್ತಿದ್ದು, ಸಂಬಂಧಿಸಿದ ಅಧಿಕಾರಿಗಳು ಈ ವ್ಯವಸ್ಥೆಯನ್ನು ನೋಡಿಯೂ ಸುಮ್ಮನಿರುವುದು ವಿಷಾದನೀಯ ಸಂಗತಿ ಎಂದಿದ್ದಾರೆ.

ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ರೈಲ್ವೆ ಇಲಾಖೆ, ಜಿಲ್ಲಾಡಳಿತ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿ ರೈಲು ನಿಲ್ದಾಣದ ಹೊರಭಾಗದ ಪರಿಸರವನ್ನು ಸ್ವಚ್ಛವಾಗಿ ಇಡಲು ಪಣ ತೊಡಬೇಕಾಗಿದೆ ಎಂದು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಫುಟ್ ಪಾತ್‌ನಲ್ಲಿ ಗಾಂಜಾ ಮಾರಾಟ; ಬೆಂಗಳೂರಿನಲ್ಲಿ ಆರೋಪಿ ಅರೆಸ್ಟ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಗರದಲ್ಲಿ ಗಾಂಜಾ ಮಾರಾಟದ ಖಚಿತ ಮಾಹಿತಿಯ ಮೇರೆಗೆ ಹಲಸೂರು ಗೇಟ್ ಠಾಣೆಯ ಪೊಲೀಸರು ಓರ್ವ ಆರೋಪಿಯನ್ನು ಬಂಧಿಸಿದ್ದಾರೆ.

ಕುಶಾಲ್ ಬಂಧಿತ ಆರೋಪಿ. ಆರೋಪಿ ಕುಶಾಲ್, ನಗರದ ಕೆ.ಜಿ ರಸ್ತೆಯ ಫುಟ್ ಪಾತ್ ಮೇಲೆ 1 ಕೆ.ಜಿ ತೂಕದ ಗಾಂಜಾ ಮಾರಾಟ ಮಾಡಲು ಯತ್ನಿಸುತ್ತಿದ್ದ ಸಂದರ್ಭದಲ್ಲಿ ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದಾನೆ. ಆರೋಪಿ ಮತ್ತೊಬ್ಬ ವ್ಯಕ್ತಿಯಿಂದ ಗಾಂಜಾ ಪಡೆದು ಮಾರಾಟ ಮಾಡುತ್ತಿದ್ದ ಎಂಬುದು ತಿಳಿದು ಬಂದಿದೆ.

ಕುಶಾಲ್ 1 ಕೆ.ಜಿಯಷ್ಟು ಗಾಂಜಾವನ್ನು ಮಾರಲು ಪ್ರಯತ್ನಿಸಿದರೆ, ಇನ್ನೂ 9 ಕೆಜಿ ಗಾಂಜಾ ಮತ್ತೋರ್ವನ ಮನೆಯಲ್ಲಿರುವುದು ತಿಳಿದು ಬಂತು. ಕೂಡಲೇ ಅವನ ಮನೆಗೆ ನುಗ್ಗಿದ ಪೊಲೀಸರು ಗಾಂಜಾವನ್ನು ವಶಕ್ಕೆ ತೆಗೆದುಕೊಂಡಿದ್ದಾರೆ. ಈ ನಡುವೆ ಮನೆಯಲ್ಲಿದ್ದ ವ್ಯಕ್ತಿ ಪರಾರಿಯಾಗಿದ್ದಾನೆ. ಸದ್ಯ ಒಬ್ಬನನ್ನು ಬಂಧಿಸಿರುವ ಹಲಸೂರು ಗೇಟ್ ಪೊಲೀಸರು, ತಪ್ಪಿಸಿಕೊಂಡವನನ್ನು ಹುಡುಕುತ್ತಿದ್ದಾರೆ.

# ಅಮಾನವೀಯ ಕೃತ್ಯ: ಸೆ*ಕ್ಸ್ ಗೆ ಒಪ್ಪದ ಪತ್ನಿಯನ್ನು ಬರ್ಬರವಾಗಿ ಕೊಲೆಗೈದ ಪತಿ

■ವಿಜಯಸಾಕ್ಷಿ ಸುದ್ದಿ, ಯಾದಗಿರಿ

ಜಿಲ್ಲೆಯ ಸುರಪುರದ ನಗರದ ಡೊಣ್ಣಿಗೇರ ಬಡಾವಣೆಯಲ್ಲಿ ದೈಹಿಕ ಸಂಪರ್ಕಕ್ಕೆ ಒಪ್ಪದ ಕಾರಣಕ್ಕೆ ವ್ಯಕ್ತಿಯೊಬ್ಬ ಪತ್ನಿಯನ್ನು ಕೊಡಲಿಯಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಿದ ದಾರುಣ ಘಟನೆ ಜರುಗಿದೆ. ಮರೆಮ್ಮ (35) ಮೃತ ಪತ್ನಿ. ಸಂಗಪ್ಪ ಕೊಲೆ ಮಾಡಿದ ಪತಿ. ಸದ್ಯ ಘಟನಾ ಸ್ಥಳಕ್ಕೆ ಸುರಪುರ ಠಾಣೆಯ ಪೊಲೀಸರು ಭೇಟಿ ನೀಡಿ ಸ್ಥಳ ಮಹಜರು ನಡೆಸಿದ್ದು, ಪ್ರಕರಣ ದಾಖಲಿಸಿದ್ದಾರೆ. ಸಂಗಪ್ಪನನ್ನು ಬಂಧಿಸಲಾಗಿದೆ.

# ವಿಷಾಹಾರ ಸೇವಿಸಿ 54ಕ್ಕೂ ಹೆಚ್ಚು ಕುರಿಗಳ ಸಾವು



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ವಿಷಾಹಾರ ಸೇವಿಸಿ 54ಕ್ಕೂ ಹೆಚ್ಚು ಕುರಿಗಳು ಸಾವಿಗೀಡಾಗಿರುವ ಘಟನೆ ಶಿರಹಟ್ಟಿ ತಾಲೂಕಿನ ಹೊಳೆಇಟಗಿ ಗ್ರಾಮದ ಜಮೀನಿನಲ್ಲಿ ರವಿವಾರ ತಡರಾತ್ರಿ ಜರುಗಿದೆ.

ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲೂಕಿನ ಮಣಿಗಿನಿ ಪೂಜಾರಿ ಅವರಿಗೆ ಸೇರಿದ 38 ಹಾಗೂ ಯಲ್ಲವ್ವ ಬೀರಸಿದ್ದ ಪೂಜಾರಿ ಅವರಿಗೆ ಸೇರಿದ 16 ಕುರಿಗಳು ಮೃತಪಟ್ಟಿವೆ. ರವಿವಾರ ಸಂಜೆ ಹೊಳೆಇಟಗಿ ಹತ್ತಿರ ಶಿರಗಾಂವ ಗ್ರಾಮದಲ್ಲಿ ಕುರಿ ಮೇಯಿಸುತ್ತಿದ್ದ ವೇಳೆ ಕುರಿಗಳು ವಿಷಾಹಾರ ಸೇವಿಸಿ ಸಾವಿಗೀಡಾಗಿದ್ದು, ಘಟನಾ ಸ್ಥಳಕ್ಕೆ ತಹಸೀಲ್ದಾರ ರಾಘವೇಂದ್ರ ರಾವ್, ಜಿಲ್ಲಾ ಕುರಿ ನಿಗಮದ ನಿರ್ದೇಶಕ ಉಮೇಶ ತಿರ್ಲಾಪೂರ, ತಾಲೂಕಾ ಪಶು ವೈದ್ಯಾಧಿಕಾರಿ ನಿಂಗಪ್ಪ ಓಲೇಕಾರ, ಸಮಾಜದ ಮುಖಂಡ ಮಂಜುನಾಥ ಘಂಟಿ ಸೇರಿ ಗ್ರಾಮಸ್ಥರು ಭೇಟಿ ನೀಡಿ, ಕುರಿಗಾರರಿಗೆ ಸಾಂತ್ವನ ಹೇಳಿದರು.

# ಅಂಜುಮನ್ ಕಮಿಟಿಗೆ ಆಯ್ಕೆಯಾದ ಸದಸ್ಯರಿಗೆ ಇಂಕ್ವಿಲಾಬ್ ತಂಡದಿಂದ ಅಭಿನಂದನೆ

■ವಿಜಯಸಾಕ್ಷಿ ಸುದ್ದಿ, ಗದಗ

ನೀವೆಲ್ಲರೂ ಅಂಜುಮನ್ ಎಂದರೇನು, ಅದರ ಚಿರಾಸ್ತಿಗಳು, ಸರ್ಕಾರದಿಂದ ಯಾವ ಸೌಲಭ್ಯ ಹೇಗೆ ಪಡೆಯಬೇಕೆಂದು ಅರಿತುಕೊಳ್ಳಬೇಕು. ಸಮುದಾಯದ ಬಡ ಜನರ ಕುಂದು-ಕೊರತೆಗಳನ್ನು ಸಂಪೂರ್ಣವಾಗಿ ಪರಿಶೀಲಿಸಿ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಎಸ್‌ಡಿಪಿಐ ರಾಜ್ಯ ಉಪಾಧ್ಯಕ್ಷ ಅಬ್ದುಲ್ ಹನ್ನಾನ್ ಹೇಳಿದರು.

16 ವರ್ಷದ ಬಳಿಕ ನಡೆದ ಗದಗ-ಬೆಟಗೇರಿ ಅಂಜುಮನ್ ಸಂಸ್ಥೆಯ ಚುನಾವಣೆಯಲ್ಲಿ ಆಯ್ಕೆಯಾದ ಸದಸ್ಯರ ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡಿದರು.




ನ್ಯಾಯವಾದಿಗಳಾದ ಮುಕ್ತಾರ್ ಅಹಮ್ಮದ್ ಮೌಲ್ವಿ ಮಾತನಾಡಿ, ಒಗ್ಗಟ್ಟಿನಲ್ಲಿ ಬಲವಿದೆ. ಅದರ ಜೊತೆಗೆ ಸಮುದಾಯದ ಎಲ್ಲ ಮಕ್ಕಳ ಶಿಕ್ಷಣದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಎಂದು ಹೇಳಿದರು.

ಅಂಜುಮನ್ ಏ ಇಸ್ಲಾಂ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಜಾಕೀರ ಹುಸೇನ್ ಮುಜಾವರ ಮಾತನಾಡಿ, ಆತ್ಮ ಸಾಕ್ಷಿಯಾಗಿ ನೀವು ನ್ಯಾಯದ ಪರವಾಗಿ ನಿಲ್ಲಿ. ಅಂದಾಗ ಸಮುದಾಯವು ನಿಮ್ಮ ಜೊತೆಗೆ ನಿಲ್ಲುತ್ತದೆ. ಸಮುದಾಯಕ್ಕಾಗಿ ನಿಂತಾಗ ಮಾತ್ರ ಸದೃಢ ಸಮಾಜಕಟ್ಟಲು ಸಾಧ್ಯ ಎಂದರು. ಮೌಲಾನಾ ಶಮಶುದ್ದಿನ್ ಅಣ್ಣಿಗೇರಿ ಮಾತನಾಡಿ, ನಾವು ಈ ಚುನಾವಣೆಯಲ್ಲಿ 11 ಅಭ್ಯರ್ಥಿಗಳನ್ನು ಆಯ್ಕೆ ಮಾಡಿದ್ದೇವೆ. ಇವರು ಸಮುದಾಯದ ಪಾಲಿಗೆ ಮಿನುಗುತ್ತಿರುವ ನಕ್ಷತ್ರಗಳಿದ್ದಂತೆ. ನಾವು ಯಾವ ಜಮಾತಿನವರಾದರೇನು, ಸಮುದಾಯದ ಕೆಲಸ ಬಂದಾಗ ನಾವೆಲ್ಲರೂ ಒಗ್ಗೂಡಿ ನಿಂತಾಗ ಮಾತ್ರ ಸಮುದಾಯದ ಗೆಲುವು ಸಾಧ್ಯ ಎಂದು ಹೇಳಿದರು.

ಇಂಕ್ವಿಲಾಬ್ ಗ್ರೂಪ್ ಮುಖಂಡ ಅನ್ವರ್ ಹುಸೇನ್ ಬಾಗೇವಾಡಿ, ಡಾ. ನಿಜಾಮುದ್ದಿನ್ ಅತ್ತಾರ್, ಶಹರ ಘಟಕದ ಅಧ್ಯಕ್ಷ ಬಿಲಾಲ್ ಗೋಕಾವಿ ಮಾತನಾಡಿದರು. ಈ ಸಂದರ್ಭದಲ್ಲಿ ಜಹೀರಉದ್ದಿನ ಪೀರಜಾದೆ, ಕೆ.ಐ. ಶೇಖ, ಹಾಜಿಅಲಿ ಕೊಪ್ಪಳ, ಹಿರಿಯರಾದ ಸೋಂಪುರ್, ಹಾಜಿ ಮೌಲಾಸಾಬ ಮಾನ್ವಿ, ಎಚ್.ಕೆ. ಮುಲ್ಲಾ, ಅಲ್ತಾಫ್ ಕೊಪ್ಪಳ, ಹಿದಾಯತ್ ಕಾಗದಗಾರ, ಅನ್ವರ್ ಮುಲ್ಲಾ, ಸೋಹೆಲ್ ನಾರಾಯಣಕೇರಿ, ಮೈನುದ್ದಿನ್ ಬಿಜಾಪುರ್, ಮೆಹಬೂಬ್ ಕದಡಿ, ಇಸ್ಮಾಯಿಲ್ ಅಣ್ಣಿಗೇರಿ ಮುಂತಾದವರಿದ್ದರು. ಶಿಕ್ಷಕ ಎಮ್.ಎ. ಯರಗುಡಿ ನಿರೂಪಿಸಿದರು.


**ಪುರಸಭೆ ಕಾರ್ಯಾಲಯ, ನರಗುಂದ**

ಜಿ:ಗದಗ, ಕರ್ನಾಟಕ -582207

ದೂರವಾಣಿ/ಫ್ಯಾಕ್ಸ್: 08377-244226 Email:ka.naragund.tmc@gmail.com

ಕ್ರಸಂ:ಪುಸನ/ಎಸ್.ಎಫ್.ಸಿ&ಸಾ.ನಿ/ಟೆಂಡರ್/2025-26. ದಿನಾಂಕ:06-10-2025.

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ನರಗುಂದ ಪುರಸಭೆ ಸನ್ 2025-26 ನೇ ಸಾಲಿನ ಎಸ್.ಎಫ್.ಸಿ ಹಾಗೂ ಪುರಸಭೆ ಸಾಮಾನ್ಯ ನಿಧಿ ಅನುದಾನದಡಿ ಈ ಕೆಳಕಾಣಿಸಿದವುಗಳಿಗೆ ಅಲ್ಪಾವಧಿ ಟೆಂಡರ್ ಪ್ರಕಟಿಸಲಾಗಿರುತ್ತದೆ. ಸದರ ಕಾಮಗಾರಿ/ಸಾಮಗ್ರಿಗಗಳಿಗೆ ಟೆಂಡರ್ ಸಲ್ಲಿಸಲು ಇಚ್ಛಿಸುವ ಗುತ್ತಿಗೆದಾರರು ವ ಫರ್ಮದಾರರು **ದಿನಾಂಕ:14-10-2025** ರ ಕಚೇರಿ ಅವಧಿಯ ಒಳಗಾಗಿ ಅರ್ಜಿ ಸಲ್ಲಿಸಿ ಟೆಂಡರ್ ಫಾರಂ ಫೀ ಭರಣಾ ಮಾಡಿ, ಬುಕಲೆಟ್ ಪಡೆದುಕೊಂಡು **ದಿನಾಂಕ:15-10-2025 ಸಂಜೆ 4:00** ಗಂಟೆಯ ಒಳಗಾಗಿ ಟೆಂಡರ್ ಸಲ್ಲಿಸುವುದು. ಟೆಂಡರ್ ಮಂಜೂರು ವ ನಾಮಂಜೂರ ಮಾಡುವ ಅಧಿಕಾರವನ್ನು ಪುರಸಭೆಯು ಕಾಯ್ದಿರಿಸಿಕೊಂಡಿದೆ. ಹೆಚ್ಚಿನ ಮಾಹಿತಿಯನ್ನು ಪುರಸಭೆಯ ತಾಂತ್ರಿಕ ಶಾಖೆಯಲ್ಲಿ ಸಂಪರ್ಕಿಸಿ ಪಡೆದುಕೊಳ್ಳಬಹುದು.

**(1)** ನರಗುಂದ ಪುರಸಭೆ ಕಟ್ಟಡದ ನೂತನ ಕಚೇರಿ ಕಟ್ಟಡಕ್ಕೆ ಮುಖ್ಯ ಬಾಗಿಲು ಅಳವಡಿಸುವುದು-**ರೂ.4.99** ಲಕ್ಷಗಳು **(2)** ನರಗುಂದ ಪುರಸಭೆ ಕಟ್ಟಡದ ನೂತನ ಕಚೇರಿ ಕಟ್ಟಡಕ್ಕೆ ರ್‍ಯಾಂಪ್ ನಿರ್ಮಾಣ ಮಾಡುವುದು-**ರೂ.1.22** ಲಕ್ಷಗಳು **(3)** ದಂಡಾಪೂರ ಸ್ಮಶಾನದ ಮುಂದೆ ಸಿ.ಡಿ ನಿರ್ಮಾಣ ಮಾಡುವುದು-**ರೂ.3** ಲಕ್ಷಗಳು **(4)** ವೆಂಕಟೇಶ್ವರ ಗುಡಿಯ ಹತ್ತಿರ ಮಳೆಯಿಂದ ಹಾನಿಯಾದ ತಡೆಗೋಡೆ ನಿರ್ಮಾಣ-ರೂ.3 ಲಕ್ಷಗಳು

**ಸಹಿ/- ಮುಖ್ಯಾಧಿಕಾರಿ ಪುರಸಭೆ ನರಗುಂದ** **ಸಹಿ/- ಅಧ್ಯಕ್ಷರು ಪುರಸಭೆ ನರಗುಂದ**

ವಾ.ಸಾ.ಇ/ಗದಗ/319/ದೇಶಪಾಂಡೆಪಬ್ಲಿಸಿಟಿ/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka